


# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com


Vol-04 | Issue: 228 | ₹ ಬೆಲೆ: 4 | Wednesday, 01, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


**ಕನ್ನಡ ನಾಡಿನ ಸಮಸ್ತ ಜನತೆಗೆ 'ಬೆಳಗಾವಿ ವರದಿ ದಿನ ಪತ್ರಿಕೆ: ವತಿಯಿಂದ ಕರ್ನಾಟಕ ರಾಜ್ಯೋತ್ಸವದ ಹಾರ್ದಿಕ ಶುಭಾಶಯಗಳು**

## 56 ದಿನಗಳಿಂದ ಪ್ರತಿಭಟನೆ ನಡೆಸುತ್ತಿರುವ ನಿಮ್ಮ ಒತ್ತಾಯಗಳನ್ನು ಕೇಳಲು ನಾನು ಬಂದಿದ್ದೇನೆ

# ಅಧಿಕಾರಕ್ಕೆ ಅಂಟಿಕೊಂಡು ಕೂರುವುದಿಲ್ಲ. ರೈತರ ಹಿತ ಕಾಯುವುದು ಶತಸಿದ್ಧ: ಸಿಎಂ ಅಭಯ

ಮಂಡ್ಯ: ನಾವು ಅಧಿಕಾರಕ್ಕೆ ಅಂಟಿಕೊಂಡು ಕೂರುವುದಿಲ್ಲ. ಅಧಿಕಾರಕ್ಕಿಂತ ರೈತರ ಹಿತಾಸಕ್ತಿ ಕಾಪಾಡುವುದು ನಮಗೆ ಮುಖ್ಯ. ಎಂಥಾದ್ದೇ ಪರಿಸ್ಥಿತಿ ಬಂದರೂ ರೈತರ ಹಿತ ಕಾಯುವುದು ಶತಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಯ ನೀಡಿದರು.




ಮಂಡ್ಯ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಮತ್ತು ಹಲವು ಸಂಘಟನೆಗಳ ಒಕ್ಕೂಟ ನಡೆಸುತ್ತಿದ್ದ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ಬಳಿಕ ಪ್ರತಿಭಟನಾಕಾರರ ಮನವಿ ಪತ್ರ ಸ್ವೀಕರಿಸಿ ಅವರ ಬೇಡಿಕೆಗಳಿಗೆ ಸ್ಪಂದಿಸಿ ಮಾತನಾಡಿದರು.

ನಾವು ಈ ವರ್ಷ ಭೀಕರ ಬರಗಾಲ ಎದುರಿಸುತ್ತಿದ್ದೇವೆ. ಮಳೆ ಪೂರ್ತಿ ಕೈಕೊಟ್ಟಿದೆ. ಇದರಿಂದ ಜಲಾಶಯಗಳು ತುಂಬದೆ ನಾವು ಸಂಕಷ್ಟದ ವರ್ಷದಲ್ಲಿ ಇದ್ದೇವೆ. ನಾವು ತಮಿಳುನಾಡಿಗೆ 177.25 ಟಿಎಂಸಿ ನೀರು ಕೊಡಬೇಕು ಎನ್ನುವ ಆದೇಶ ಹೊರಬಿದ್ದಿದೆ. ಪ್ರತಿ ತಿಂಗಳು ಇಷ್ಟಿಷ್ಟು ನೀರು ಬಿಡಬೇಕು ಎನ್ನುವ ಆದೇಶ ಇದೆ. ನಾವು ಕಾವೇರಿ ಪ್ರಾಧಿಕಾರ ಮತ್ತು ಸಮಿತಿ ಎದುರು ನೀರಿಲ್ಲ, ಆದ್ದರಿಂದ ನೀರು ಬಿಡಲು ಸಾಧ್ಯವಿಲ್ಲ ಎಂದು ನಮ್ಮ ವಾದವನ್ನು ಬಲವಾಗಿ ಮಂಡಿಸಿದ್ದೇವೆ. ಆದರೂ ಮೊದಲು 5000 ಕ್ಯೂಸೆಕ್ಸ್ ನೀರು ಬಿಡಲು ಹೇಳಿದರು, ಬಳಿಕ 3000 ಕ್ಯೂಸೆಕ್ಸ್ ನೀರು ಬಿಡಲು ಆದೇಶ ಬಂತು. ಅದಕ್ಕೂ ನಾವು ಒಪ್ಪಲಿಲ್ಲ. ಈಗ ನೆನ್ನೆ ದಿನ 2600 ಕ್ಯೂಸೆಕ್ಸ್ ನೀರು ಬಿಡಲು ಆದೇಶವಾಗಿದೆ. ಆದರೆ ನಾವು ಕುಡಿಯುವ ನೀರಿಗೆ ಮತ್ತು ಬೆಳೆ ಉಳಿಸಿಕೊಳ್ಳಲು ಮೊದಲ ಆದ್ಯತೆ ನೀಡುತ್ತೇವೆ. ಮುಂಗಾರು ಬೆಳೆಯನ್ನು ಉಳಿಸಿಕೊಳ್ಳಲು ಶತಾಯಗತಾಯ ಪ್ರಯತ್ನಿಸುತ್ತೇವೆ. ನಾನೂ ರೈತ ಹೋರಾಟದಲ್ಲಿ ಬಂದಿರುವ ರೈತರ ಮಗ. ನಾವೂ ಅಚ್ಚುಕಟ್ಟೆ ಪ್ರದೇಶದಲ್ಲೇ ಇದ್ದೇವೆ. ಆದ್ದರಿಂದ ರೈತರ ಸಂಕಷ್ಟ ನನಗೆ ಚೆನ್ನಾಗಿ ಗೊತ್ತಿದೆ. ಆದ್ದರಿಂದ ನಿಮ್ಮ ಹಿತ ಕಾಯಲು ಹಿಂದೆ ಬೀಳುವುದಿಲ್ಲ. ಅಧಿಕಾರಕ್ಕಾಗಿ ರೈತರನ್ನು ಬಲಿ ಕೊಡುವುದಿಲ್ಲ. ನಾವು ಕೇವಲ ಅಧಿಕಾರಕ್ಕಾಗಿ ಅಂಟಿಕೊಂಡು ಕೂರುವವರಲ್ಲ ಎಂದು ಸ್ಪಷ್ಟವಾಗಿ ನುಡಿದರು.

ರೈತರ ಹಿತ ಕಾಯಲು ಗಂಭೀರವಾದ, ಪ್ರಾಯೋಗಿಕವಾದ ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿದರು.

ಕಬ್ಬು ಬೆಳೆಗಾರರ ಹಿತಕ್ಕಾಗಿ ಮೈಶುಗರ್ ಸಕ್ಕರೆ ಕಾರ್ಖಾನೆಗೆ 50 ಕೋಟಿ ರೂ ಬಿಡುಗಡೆ ಮಾಡಿದ್ದೇವೆ. ನಾವು ನಿಮ್ಮ ಪರವಾಗಿ ಇರುವವರು. ಅನುಮಾನ ಬೇಡವೇ ಬೇಡ ಎಂದರು. ಕೃಷಿ ಸಚಿವರಾದ ಚಲುವರಾಯಸ್ವಾಮಿ, ಶಾಸಕರಾದ ರವಿ ಗಣಿಗ, ದಿನೇಶ್ ಗೂಳಿಗೌಡ, ನರೇಂದ್ರಸ್ವಾಮಿ ಸೇರಿದಂತೆ ಹಲವು ಮಂದಿ ನಾಯಕರು ಪ್ರತಿಭಟನಾಕಾರರ ಬೇಡಿಕೆಗಳನ್ನು ಆಲಿಸಿದರು.

## ಇನ್ನು 5 ವರ್ಷ ಸಿದ್ದರಾಮಯ್ಯನೇ ಸಿಎಂ: ಸಚಿವ ಜಮೀರ್



ದಾವಣಗೆರೆ: ಸಿಎಂ ಸೀಟ್ ಖಾಲಿ ಇಲ್ಲ, ಇನ್ನು 5 ವರ್ಷ ಸಿದ್ದರಾಮಯ್ಯನೇ ಸಿಎಂ ಎಂದು ದಾವಣಗೆರೆಯಲ್ಲಿ ವಸತಿ ಹಾಗೂ ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಸಿದ್ದರಾಮಯ್ಯ ಪರ ಬ್ಯಾಟ್ ಬೀಸಿದ್ದಾರೆ.

ದಾವಣಗೆರೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾನು ಯಾರೇ ಏನು ಅಂದರೂ ಸಿದ್ದರಾಮಯ್ಯ ಪರ. ಸಿಎಂ ಸ್ಥಾನದ ಅವಧಿ ಬಗ್ಗೆ ನಿರ್ಧಾರ ಮಾಡೋದು ಹೈಕಮಾಂಡ್. ಹೈಕಮಾಂಡ್ ಹೇಳಿದ್ರೆ ಸಿದ್ದುನೇ 5 ವರ್ಷ ಸಿಎಂ ಆಗಿರುತ್ತಾರೆ ಎಂದರು.

ಮಾಜಿ ಸಚಿವ ರಮೇಶ್ ಜಾರಕಿಹೊಳಿಯಿಂದ ಆಪರೇಷನ್ ಕಮಲ ಅಸಾಧ್ಯ. ಮಾಜಿ ಸಚಿವ ರಮೇಶ್ ಜಾರಕಿಹೊಳಿ ಹಗಲು ಕನಸು ಕಾಣ್ತಿದ್ದಾರೆ. 56 ಜನ ಎಂಎಲ್‌ಎಗಳನ್ನು ಕರೆದುಕೊಂಡು ಹೋಗಿ ಆಪರೇಷನ್ ಮಾಡೋದು ಸಾಧ್ಯನಾ? ರಮೇಶ್ ಜಾರಕಿಹೊಳಿ ಅವರನ್ನೇ ಕೇಳಿ ಆಪರೇಷನ್ ಎಷ್ಟು ಕಷ್ಟ ಅಂತ. ಸಮ್ಮಿಶ್ರ ಸರ್ಕಾರದಲ್ಲಿ 17 ಜನರನ್ನು ಕರೆದುಕೊಂಡು ಹೋಗಲು ಎಷ್ಟು ಎಷ್ಟು ಸರ್ಕಸ್ ಮಾಡಿದ್ದಾರೆ. ರಮೇಶ್ ಹೈಕಮಾಂಡ್ ಬಳಿ ಬೇಳೆ ಬೇಯಿಸಿಕೊಳ್ಳಲು ಹೀಗೆ ಮಾತಾಡ್ತಿದ್ದಾರೆ. ರಮೇಶ್ ಬಿಜೆಪಿಯಲ್ಲಿ ಇರೋ ಶಾಸಕರನ್ನು ಉಳಿಸಿಕೊಳ್ಳಲಿ. ಬಿಜೆಪಿ ಶಾಸಕರು ಕಾಂಗ್ರೆಸ್‌ಗೆ ಬರಲು ಒಂದು ಕಾಲಿನಲ್ಲಿ ನಿಂತಿದ್ದಾರೆ. ಮೊದಲು ಅವರ ಬಗ್ಗೆ ಗಮನ ಹರಿಸಲಿ ಎಂದರು.

ಇನ್ನು ಡಾ. ಪರಮೇಶ್ ಮನೆಯಲ್ಲಿ ಸಿಎಂ ಸಿದ್ದರಾಮಯ್ಯ ಊಟಕ್ಕೆ ಹೋದ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ನನ್ನನ್ನು ಕೂಡಾ ಕರೆದಿದ್ದರು. ಆದ್ರೆ ಹೋಗುವುದಕ್ಕೆ ಆಗಿಲ್ಲ. ಉಪಮುಖ್ಯಮಂತ್ರಿಯವರನ್ನು ಕರೆದಿರುತ್ತಾರೆ. ಸತೀಶ್ ಜಾರಕಿಹೊಳಿ ಅವರಿಗೆ ಯಾವುದೇ ಅಸಮಾಧಾನ ಇಲ್ಲ ಎಂದ ಜಮೀರ್ ಅಹಮದ್ ಮೂಡಿದ ಗೊಂದಲಕ್ಕೆ ತೆರೆ ಎಳೆದರು.

## ಪತ್ರಿಕಾ ವಿತರಕರ ಶ್ರಮ ಗುರುತಿಸಿ ಗೌರವಿಸಿದ ರಾಜ್ಯ ಸರ್ಕಾರ ಮತ್ತು ಆಯ್ಕೆ ಸಮಿತಿ



ಬೆಂಗಳೂರು: ರಾಜ್ಯದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಪತ್ರಿಕಾ ವಿತರಕರನ್ನೂ ರಾಜ್ಯೋತ್ಸವ ಪ್ರಶಸ್ತಿಗಾಗಿ ಪರಿಗಣಿಸಿ ಗೌರವಿಸಲಾಗಿದೆ.

ಮಾಧ್ಯಮ ಕ್ಷೇತ್ರದ ಅವಿಭಾಜ್ಯ ಅಂಗವಾಗಿರುವ ಪತ್ರಿಕಾ ವಿತರಕಾ ಸಮುದಾಯದಿಂದ ಜವರಪ್ಪ ಅವರಿಗೆ ಈ ಬಾರಿ ರಾಜ್ಯೋತ್ಸವ ಪ್ರಶಸ್ತಿ ನೀಡಿ ಇಡಿ ವಿತರಕ ಸಮುದಾಯವನ್ನು, ಈ ಸಮುದಾಯದ ಕಾರ್ಯಕ್ಷಮತೆ ಮತ್ತು ಶ್ರಮವನ್ನು ರಾಜ್ಯ ಸರ್ಕಾರ ಮತ್ತು ಆಯ್ಕೆ ಸಮಿತಿ ಗುರುತಿಸಿದೆ, ಗೌರವಿಸಿದೆ.

ತುಮಕೂರಿನಲ್ಲಿ ಇತ್ತೀಚಿಗೆ ಜರುಗಿದ ಪತ್ರಿಕಾ ವಿತರಕರ ರಾಜ್ಯ ಸಮ್ಮೇಳನದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ್ದ, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು, "ರಾಜ್ಯ ಸರ್ಕಾರದ ಪ್ರಶಸ್ತಿಗಳಲ್ಲಿ ಪತ್ರಿಕಾ ವಿತರಕರನ್ನೂ ಪರಿಗಣಿಸಲಾಗುವುದು" ಎನ್ನುವ ಭರವಸೆ ನೀಡಿದ್ದನ್ನು ಇಲ್ಲಿ ಸ್ಮರಿಸಿಕೊಳ್ಳಬಹುದು.

## ಇಂದು ಕನ್ನಡ ರಾಜ್ಯೋತ್ಸವದಲ್ಲಿ ಈ 5 ಗೀತೆಗಳ ಗಾಯನ ಕಡ್ಡಾಯ




ಬೆಂಗಳೂರು: ಕರ್ನಾಟಕ ಎಂದು ಮರು ನಾಮಕರಣವಾಗಿ ಬರುವ ನವೆಂಬರ್ 1ಕ್ಕೆ 50 ವರ್ಷ ಪೂರ್ಣಗೊಳ್ಳಲಿರುವ ಹಿನ್ನೆಲೆಯಲ್ಲಿ ಕರ್ನಾಟಕ ಸಂಭ್ರಮ–50 'ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ' ಅಭಿಯಾನ ಅಂಗವಾಗಿ ಸರ್ಕಾರ ಆಯ್ಕೆಮಾಡಿರುವ ನಾಡಿನ ಹೆಸರಾಂತ ಕವಿಗಳ 5 ಕನ್ನಡ ಹಾಡುಗಳನ್ನು ಜಿಲ್ಲಾ, ತಾಲೂಕು ಹಾಗೂ ಗ್ರಾಮ ಪಂಚಾಯತಿ ಮಟ್ಟದಲ್ಲಿ ನಡೆಯುವ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಹಾಡುವ ಮೂಲಕ ಸಮಸ್ತ ಕನ್ನಡಿಗರು ಕನ್ನಡಾಂಬೆಗೆ ಗೀತ ಗಾಯನದ ನಮನ ಸಲ್ಲಿಸಬೇಕೆಂದು ಸೂಚನೆ ನೀಡಲಾಗಿದೆ. ಕರ್ನಾಟಕ–50 ಸಂಭ್ರಮ ಹಿನ್ನೆಲೆಯಲ್ಲಿ 2023 ನವೆಂಬರ್ 1 ರಿಂದ 2024ರ ನವೆಂಬರ್ 1ರ ವರೆಗೆ ಇಡೀ ವರ್ಷ ಕರ್ನಾಟಕ ಇತಿಹಾಸ, ಕಲೆ, ಸಾಹಿತ್ಯ ಸಂಸ್ಕೃತಿ ಹಾಗೂ ನಾಡು ನುಡಿಗೆ ಸಂಬಂಧಿಸಿದಂತೆ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಇದರ ಭಾಗವಾಗಿ ನವೆಂಬರ್ 1 ರಂದು ರಾಜ್ಯದೆಲ್ಲೆಡೆ ಆಚರಿಸುವ ರಾಜೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ, ರಾಷ್ಟ್ರ ಗೀತೆ, ನಾಡಗೀತೆ, ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆಯಾದ ನಂತರ 5 ಕನ್ನಡ ಗೀತೆಗಳನ್ನು ಕಡ್ಡಾಯವಾಗಿ ಹಾಡುವ ಮೂಲಕ ನುಡಿ ನಮನ ಸಲ್ಲಿಸಬೇಕೆಂದು ಸರ್ಕಾರ ಆದೇಶಿಸಿದೆ. ಎಲ್ಲಾ ಶಾಲಾ–ಕಾಲೇಜು, ವಿಶ್ವವಿದ್ಯಾಲಯಗಳು, ಸರ್ಕಾರಿ, ಅರೆ–ಸರ್ಕಾರಿ, ನಿಗಮ ಮಂಡಳಿಗಳ ಕಚೇರಿಗಳು, ಬ್ಯಾಂಕ್‌ಗಳು ಹಾಗೂ ಸಂಘ ಸಂಸ್ಥೆಗಳು ನವೆಂಬರ್ 1 ರಂದು ಆಚರಿಸುವ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಈ ಕನ್ನಡ ಹಾಡುಗಳನ್ನು ಹಾಡುವ ಮೂಲಕ ಕನ್ನಡಾಂಬೆಗೆ ನುಡಿ ನಮನ (ಗೀತ ಗಾಯನ) ಸಲ್ಲಿಸಬೇಕೆಂದು ತಿಳಿಸಲಾಗಿದೆ.

# ರಾಜ್ಯದಲ್ಲಿ ಯಾವ ಕಾರಣಕ್ಕೂ ಕಾಂಗ್ರೆಸ್ ಸರ್ಕಾರ ಬದಲಾಗಲ್ಲ: ಸಚಿವ ಸತೀಶ್ ಜಾರಕಿಹೊಳಿ

ವಿಜಯಪುರ: ರಾಜ್ಯದಲ್ಲಿ ಯಾವ ಕಾರಣಕ್ಕೂ ಕಾಂಗ್ರೆಸ್ ಸರ್ಕಾರ ಬದಲಾಗಲ್ಲ. ಐದು ವರ್ಷಗಳ ಕಾಲ ಪೂರ್ಣ ಪ್ರಮಾಣದಲ್ಲಿ ಅಸ್ತಿತ್ವದಲ್ಲಿ ಇರುತ್ತದೆ. ಇದರಲ್ಲಿ ಎರಡು ಮಾತಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಇಂಡಿ ತಾಲೂಕಿನ ಹಳಗುಣಕಿ ಗ್ರಾಮದಲ್ಲಿ ಸೋಮವಾರ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಮ್ಮ ಸರ್ಕಾರದಲ್ಲಿ ಯಾವ ಗೊಂದಲವೂ ಇಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕೆಲವೊಂದು ವಿಚಾರ ಪ್ರಸ್ತಾಪವಾಗಿವೆಯೇ ಹೊರತು ಅದು ಗೊಂದಲವಲ್ಲ. ಅದು ಅವರವರ ಅಭಿಪ್ರಾಯ ಆಗಿರಬಹುದಷ್ಟೇ ಎಂದರು.

ವಾಲ್ಮೀಕಿ ಸಮಾಜದ ಮುಖಂಡರಿಗೆ ಸರ್ಕಾರ ಚೇಂಜ್ ಮಾಡುವ ಶಕ್ತಿಯಿದೆ ಎನ್ನುವ ಶಾಸಕ ರಾಜಾ ವೆಂಕಟಪ್ಪ ನಾಯಕ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ಈ ರೀತಿ ಏಕೆ ಹೇಳಿದರೂ ಎಂಬುದು ಅವರನ್ನೇ ಕೇಳಬೇಕು. ಅವರ ಹೇಳಿಕೆ ಬಿಟ್ಟು ಬೇರೆ ಕೇಳಿ ಎಂದರು. ದುಬೈ ಟೂರ್ ವಿಚಾರವಾಗಿಯೂ ಮಾತನಾಡಿ, ಇದು ಒಂದು ಖಾಸಗಿ ಕಾರ್ಯಕ್ರಮ. ಶಾಸಕರು ಇದರಲ್ಲಿ ಯಾರೂ ಪಾಲ್ಗೊಳ್ಳುತ್ತಿಲ್ಲ. ತಾವು ಮಾತ್ರ ತೆರಳುತ್ತಿರುವುದಾಗಿ ಹೇಳಿದರು.

ಇದಕ್ಕೂ ಮುನ್ನ ಇದೇ ಗ್ರಾಮದಲ್ಲಿ ಮಾತನಾಡಿದ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್ ಸಿ ಮಹದೇವಪ್ಪ, ಕಾಂಗ್ರೆಸ್



ಪಕ್ಷದಲ್ಲಿ ಒಂದೇ ಬಣ ಇದೆ. ಸಿಎಂ ಹುದ್ದೆ ಖಾಲಿ ಇಲ್ಲ. ಕೆಲ್ಸಕ್ಕೆ ಬಾರದವರು ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಚರ್ಚೆ ಮಾಡುತ್ತಿದ್ದಾರೆ. ಮುಖ್ಯಮಂತ್ರಿ ಹುದ್ದೆಯಲ್ಲಿ ಸಿದ್ದರಾಮಯ್ಯ ಅವರು ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದಾರೆ. ಯಾರೋ ಕೆಲವರು ಸಿಎಂ ಅವರನ್ನು ಬದಲಾಯಿಸುವ ಕುರಿತು ಮಾತನಾಡುತ್ತಿದ್ದಾರೆ ಎಂದು ಟಾಂಗ್ ಕೊಟ್ಟರು.

ಕಾವೇರಿ ನೀರು ಬಿಡುಗಡೆ ವಿಚಾರ: ತಮಿಳುನಾಡಿಗೆ ಮತ್ತೆ ನೀರು ಬಿಡುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ಶಿಫಾರಸಿನ ಬಗ್ಗೆ ಪ್ರತಿಕ್ರಿಯಿಸಿದ ಅವರು, ಆ ಭಾಗದ ರೈತರು ಈಗಾಗಲೇ ಸಂಕಷ್ಟದಲ್ಲಿದ್ದಾರೆ. ಸರ್ಕಾರ ಇದೆ, ಹೇಗೆ ನಿಭಾಯಿಸುತ್ತೆಂದು ಕಾದು ನೋಡೋಣ.

ಕಾವೇರಿ ವಿಚಾರದಲ್ಲಿ ರಾಜ್ಯ ಸರ್ಕಾರ ಅಸಹಾಯಕವಾಗಿದ್ದು, ಸುಪ್ರೀಂ ಒತ್ತಡ, ಆದೇಶ ಮಾಡಬೇಕಾಗಿದೆ. ಅದರ ಹೊರತಾಗಿ ಸರ್ಕಾರ ಏನೂ ಮಾಡಲಾಗದು.

ಕೇಂದ್ರದ ಬಳಿ ಎಷ್ಟೇ ಸಲ ನಿಯೋಗ ಕರೆದೊಯ್ದರೂ ಪ್ರಯೋಜನ ಇಲ್ಲ. ನ್ಯಾಯಾಂಗದ ಮೂಲಕವೇ ಹೋರಾಟ ಮಾಡಬೇಕು ಎಂದರು.

ಡಿಸಿಎಂ ಡಿಕೆ ಶಿವಕುಮಾರ್ ಬಿಟ್ಟು ಗೃಹ ಸಚಿವ ಪರಮೇಶ್ವರ್ ಸಭೆ ವಿಚಾರ ಮಾತನಾಡಿದ ಅವರು, ಇದಕ್ಕೆ ನಾನು ಏನು ಹೇಳಬೇಕು. ಸಭೆಯಲ್ಲಿ ನಾನೂ ಇದ್ದೆ ಎಂದರು. ಕಾಂಗ್ರೆಸ್ ಸರ್ಕಾರದಲ್ಲಿ ಒಗ್ಗಟ್ಟು ಇದೆ. ಹಾಗಾಗಿಯೇ ಸರ್ಕಾರ ರಚನೆ ಆಗಿದೆ. ಯಾವುದೇ ಗೊಂದಲವಿಲ್ಲ ಎಂದು ಹೇಳಿದರು. ಇದೇ ವೇಳೆ ಸಿಎಂ ವರ್ಸಸ್ ಡಿಸಿಎಂ ವಿಚಾರದ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದ ಅವರು, ಬಿಟ್ಟು ಬೇರೆ ಕೇಳಿ, ಎಲ್ಲ ಕಡೆಗೂ ಇದರ ಬಗ್ಗೆಯೇ ಕೇಳಲಾಗುತ್ತಿದೆ ಎಂದರು.

## ಕೆಎಸ್‌ಆರ್‌ಟಿಸಿ ಸಾರಿಗೆ ಸಿಬ್ಬಂದಿಗೆ ಪರಿಹಾರ ಮೊತ್ತ ಮೂರು ಪಟ್ಟು ಹೆಚ್ಚಳ

ಬೆಂಗಳೂರು: ಕರ್ತವ್ಯದಲ್ಲಿರುವಾಗಲೇ ಅಪಘಾತದಲ್ಲಿ ಸಾವನ್ನಪ್ಪಿದ್ದ ಸಾರಿಗೆ ಸಿಬಂದಿ ಅವಲಂಬಿತರಿಗೆ ಒಂದು ಕೋಟಿ ರೂ. ವಿಮಾ ಪರಿಹಾರ ನೀಡುವ ಕೆಎಸ್ ಆರ್ ಟಿಸಿ ಇದೀಗ ನಿಗಮದ ನೌಕರರಿಗೆ ನೀಡಲಾಗುವ ಕುಟುಂಬ ಕಲ್ಯಾಣ ಯೋಜನೆಯ ಪರಿಹಾರ ಮೊತ್ತವನ್ನು ರೂ. 3 ಲಕ್ಷದಿಂದ ರೂ. 10 ಲಕ್ಷಕ್ಕೆ ಹೆಚ್ಚಿಸಿದೆ.

ನವೆಂಬರ್ 1 ರಿಂದಲೇ ಇದು ಅನ್ವಯ ಆಗಲಿದೆ. ಅಪಘಾತ ಹೊರತುಪಡಿಸಿ ಇತರ ಕಾರಣಗಳಿಂದ ಮೃತಪಟ್ಟ ನೌಕರರ ಕುಟುಂಬದವರಿಗೆ ಅಂದರೆ ಕ್ಯಾನ್ಸರ್,ಪಾರ್ಶ್ವವಾಯು, ಹೃದಯಘಾತ, ಮೂತ್ರ ಪಿಂಡ ವೈಫಲ್ಯ ಮತ್ತಿತರ ಕಾರಣಗಳಿಂದ ಪ್ರತಿ ರ್ಷ 100 ನೌಕರರು ಮೃತಪಡುತ್ತಿದ್ದಾರೆ. ಇಂತಹ ನೌಕರರ ಕುಟುಂಬದವರು ಅನುಭವಿಸುವ ಕಷ್ಟಗಳನ್ನು ಗಮನಿಸಿ, ನಿಗಮದಿಂದ ಅವರಿಗೆ ನೆರವಾಗಲು ಈ ಮೊದಲು ನೀಡುತ್ತಿದ್ದ 3 ಲಕ್ಷ ರೂ. ಪರಿಹಾರ ಮೊತ್ತವನ್ನು ರೂ. 10 ಲಕ್ಷಕ್ಕೆ ಹೆಚ್ಚಿಸಲಾಗಿದೆ.

ಈ ಯೋಜನೆಗೆ ನೌಕರರು ಮಾಸಿಕ ವಂತಿಕೆಯನ್ನು ಪ್ರಸ್ತುತ ರೂ. 100 ರಿಂದ ರೂ. 200 ಗಳಿಗೆ ಹಾಗೂ ನಿಗಮದ ವತಿಯಿಂದ ಪ್ರತಿ ನೌಕರರ ಪರವಾಗಿ ನೀಡಲಾಗುತ್ತಿರುವ 50 ರೂ.ಗಳ ವಂತಿಕೆಯನ್ನು ರೂ.100ಗಳಿಗೆ ಪರಿಷ್ಕರಿಸಲಾಗಿದೆ.

## ಸರ್ಕಾರಿ ಶಾಲೆಗೆ ಭೂಮಿ ಕೊಟ್ಟ ಹುಚ್ಚಮ್ಮಗೆ ಒಲಿದ ರಾಜ್ಯೋತ್ಸವ ಪ್ರಶಸ್ತಿ



ಕೊಪ್ಪಳ: ಸರ್ಕಾರಿ ಶಾಲೆಗೆ ಎರಡು ಎಕರೆ ಭೂಮಿ ದಾನ ಮಾಡಿದ ತಾಲ್ಲೂಕಿನ ಕುಣಿಕೇರಿ ಗ್ರಾಮದ ಹುಚ್ಚಮ್ಮ ಬಸಪ್ಪ ಚೌದ್ರಿ ಅವರಿಗೆ ಅರ್ಜಿ ಹಾಕದಿದ್ದರೂ ಸರ್ಕಾರ ಗುರುತಿಸಿ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ಇದು ಅಜ್ಜಿಯ ಖುಷಿಗೆ ಕಾರಣವಾಗಿದ್ದು 'ಮಾಧ್ಯಮದವರು ಹೇಳಿದ ಮೇಲೆ ಪ್ರಶಸ್ತಿ ಬಂದ ವಿಚಾರ ನಂಗೆ ತಿಳಿಯಿತು. ಸರ್ಕಾರವೇ ಗುರುತಿಸಿ ಪ್ರಶಸ್ತಿ ಕೊಡುತ್ತದೆ ಎಂದು ನಿರೀಕ್ಷೆ ಮಾಡಿರಲಿಲ್ಲ. ಬಹಳಷ್ಟು ಸಂತೋಷವಾಗಿದೆ ಎಂದು ತಿಳಿಸಿದ್ದಾರೆ.

1956ರಲ್ಲಿ ಕುಣಿಕೇರಿ ಗ್ರಾಮದಲ್ಲಿ ನಿರ್ಮಾಣವಾಗಿದ್ದ ಶಾಲೆ ಹಳೆಯದಾಗಿತ್ತು. ಈ ಶಾಲೆಯ ಹೊಸ ಕಟ್ಟಡಕ್ಕೆ ಭೂಮಿ ನೀಡಲು ಯಾರೂ ಮುಂದೆ ಬಾರದಿದ್ದಾಗ ಹುಚ್ಚಮ್ಮ 2002ರಲ್ಲಿ ಮೊದಲು ಒಂದು ಎಕರೆ ಭೂಮಿ ದಾನ ನೀಡಿದರು. ಮಕ್ಕಳಿಗೆ ಕ್ರೀಡಾ ಚಟುವಟಿಕೆಗಳಿಗೆ ಮೈದಾನದ ಕೊರತೆ ಕಂಡಿದ್ದರಿಂದ ಎರಡು ವರ್ಷಗಳ ಬಳಿಕ ಇನ್ನೊಂದು ಎಕರೆಯನ್ನೂ ಕೊಟ್ಟಿದ್ದರು.


ಹುಚ್ಚಮ್ಮ ಅವರಿಗೆ ಈಗ 75 ವರ್ಷ ವಯಸ್ಸು. ತಮ್ಮ 65ನೇ ವರ್ಷದ ತನಕ ಮಾಸಿಕ ಗರಿಷ್ಠ ರೂ3,000 ಗೌರವ ಧನದಲ್ಲಿ ಅದೇ ಶಾಲೆಯಲ್ಲಿ ಅಡುಗೆ ತಯಾರಕರಾಗಿ ಕೆಲಸವೂ ಮಾಡುತ್ತಿದ್ದಾರೆ.

## 'ಮಹಾ' ಸರ್ಕಾರಕ್ಕೆ ಖಡಕ್ ವಾರ್ನಿಂಗ್ ಕೊಟ್ಟ ಸಚಿವ ರಾಮಲಿಂಗಾರೆಡ್ಡಿ

ವಿಜಯಪುರ: ಕರ್ನಾಟಕದ ಬಸ್‌ಗೆ ಬೆಂಕಿ ಹಾಕೋದಕ್ಕೂ, ಮಹಾರಾಷ್ಟ್ರದ ಹೋರಾಟಕ್ಕೂ ಸಂಬಂಧ ಇಲ್ಲ. ನಮ್ಮ ಬಸ್‌ಗೆ ಬೆಂಕಿ ಹಾಕಿದ ಕೃತ್ಯ ಸರಿ ಇಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಕಿಡಿಕಾರಿದ್ದಾರೆ.

ಮಹಾರಾಷ್ಟ್ರದಲ್ಲಿ ಕೆಎಸ್‌ಆರ್ಟಿಸಿ ಬಸ್‌ಗೆ ಮರಾಠ ಪುಂಡರು ಬೆಂಕಿ ಹಚ್ಚಿದ ಪ್ರಕರಣಕ್ಕೆ ವಿಜಯಪುರದಲ್ಲಿ ಪ್ರತಿಕ್ರಿಯಿಸಿದ ಅವರು, ಮಹಾರಾಷ್ಟ್ರ ಸರ್ಕಾರ ಇದನ್ನು ಖಂಡಿಸಬೇಕು.

ಬೆಂಕಿ ಇಟ್ಟವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಮಹಾರಾಷ್ಟ್ರದ ಬಸ್‌ಗಳು ನಮ್ಮ ಕರ್ನಾಟಕಕ್ಕೂ ಬರುತ್ತವೆ ಎಂದು ಮಹಾರಾಷ್ಟ್ರ ಸರ್ಕಾರಕ್ಕೆ ಖಡಕ್ ವಾರ್ನಿಂಗ್ ನೀಡಿದರು.



ಮಹಾರಾಷ್ಟ್ರದ ಬಸ್‌ಗಳು ತಮಿಳುನಾಡು, ಕೇರಳ ಸೇರಿದಂತೆ ಬೇರೆ ಬೇರೆ ರಾಜ್ಯಗಳಿಗೂ ಹೋಗುತ್ತವೆ ಅಲ್ವಾ? ನಮಗೂ ಅವರಿಗೂ ಜಗಳ ಇಲ್ಲ. ಮಹಾರಾಷ್ಟ್ರದ ಹೋರಾಟಕ್ಕೂ ನಮಗೂ ಸಂಬಂಧ ಇಲ್ಲ.

ಅದು ಅವರ ಆಂತರಿಕ ವಿಚಾರ. ಅವರ ಆಂತರಿಕ ವಿಚಾರಕ್ಕೂ ಕರ್ನಾಟಕದ ಬಸ್‌ಗೆ ಬೆಂಕಿ ಹಾಕೋದಕ್ಕೂ ಸಂಬಂಧವೇ ಇಲ್ಲ. ಹೋರಾಟ ಮಾಡುವವರು ಅದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

ಕಾಂಗ್ರೆಸ್ ಸರ್ಕಾರದಲ್ಲಿ ಸಿಎಂ ವರ್ಸಸ್ ಡಿಸಿಎಂ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಬಿಜೆಪಿಯವರಿಗೆ ಮೊದಲು ವಿಪಕ್ಷ ನಾಯಕ ಮಾಡಿಕೊಳ್ಳಲು ಹೇಳಿ. ಬಿಜೆಪಿ ಸೋತು ಸುಣ್ಣವಾಗಿ ಹೋಗಿದೆ ಎಂದು ಮಾತಲ್ಲೆ ಬಿಜೆಪಿಗೆ ತಿರುಗೇಟು ಕೊಟ್ಟರು.

ಸತೀಶ್ ಜಾರಕಿಹೊಳಿ ದುಬೈ ಪ್ರವಾಸದ ಬಗ್ಗೆ ಮಾತನಾಡಿದ ಅವರು, ದುಬೈ ಇಲ್ಲ, ಯಾವ್ದೂ ಇಲ್ಲ. ಸರ್ಕಾರ 10 ವರ್ಷ ಇರುತ್ತೆ ಎಂದರು. ರಾಮನಗರ ಉಸ್ತುವಾರಿ ಬಗ್ಗೆ ಅಸಮಧಾನ ವಿಚಾರಕ್ಕೆ ಮಾತನಾಡಿ, ಯಾವುದೇ ಅಸಮಾಧಾನ ಇಲ್ಲ. ಏನೂ ತೊಂದರೆ ಇಲ್ಲ. ನನ್ನ ಕೆಲಸಕ್ಕೆ ಯಾರು ಅಡ್ಡಿ ಮಾಡಲ್ಲ ಎಂದರು.

ಸಿಎಂ ಬದಲಾವಣೆಯ ಪ್ರಶ್ನೆಯೇ ಇಲ್ಲ ಈಗ. ಇದೆಲ್ಲ ಮಾಧ್ಯಮ ಸೃಷ್ಟಿ. ಮಾಧ್ಯಮದವರು ಕೇಳುತ್ತಾರೆ ಅಂತ ಅವರು ಏನೋ ಹೇಳ್ತಾರೆ ಎಂದರು. ಮಹಾರಾಷ್ಟ್ರ ಮಾದರಿಯಲ್ಲಿ ಸರ್ಕಾರ ಬದಲಾವಣೆ ಮಾಡುತ್ತೇವೆ ಎಂದು ಪಾಪ ಬಿಜೆಪಿಯವರು ಕನಸು ಕಾಣ್ತಿದ್ದಾರೆ ಎಂದು ರಾಮಲಿಂಗಾರೆಡ್ಡಿ ಕಾಲೆಳೆದರು.

## ನನ್ನ ಶಕ್ತಿಯ ಮೂಲ ನನ್ನ ಅಜ್ಜಿ: ರಾಹುಲ್ ಗಾಂಧಿ

ನವದೆಹಲಿ: ನನ್ನ ಶಕ್ತಿ ನನ್ನ ಅಜ್ಜಿ ದೇಶಕ್ಕಾಗಿ ಎಲ್ಲವನ್ನೂ ತ್ಯಾಗ ಮಾಡಿದ ಅವರೇ ನನ್ನ ಶಕ್ತಿಯ ಮೂಲ ಎಂದು ಕಾಂಗ್ರೆಸ್ ನಾಯಕ ರಾಹುಲ್ಗಾಂಧಿ ಅವರು ತಮ್ಮ ಅಜ್ಜಿ ಇಂದಿರಾಗಾಂಧಿ ಅವರ ಗುಣಗಾನ ಮಾಡಿದ್ದಾರೆ.

ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ 39 ನೇ ಪುಣ್ಯಸ್ಮರಣೆಯ ಸಂದರ್ಭದಲ್ಲಿ ಅವರನ್ನು ನೆನಪಿಸಿಕೊಂಡು, ಅವರೇ ನನ್ನ ಶಕ್ತಿಯ ಮೂಲ ಎಂದು ಹೇಳಿದ್ದಾರೆ. ನನ್ನ ಶಕ್ತಿ, ನನ್ನ ಅಜ್ಜಿ! ನೀವು ಎಲ್ಲವನ್ನೂ ತ್ಯಾಗ ಮಾಡಿದ ಭಾರತವನ್ನು ನಾನು ಯಾವಾಗಲೂ ರಕ್ಷಿಸುತ್ತೇನೆ. ನಿಮ್ಮ ನೆನಪುಗಳು ಯಾವಾಗಲೂ ನನ್ನೊಂದಿಗೆ, ನನ್ನ ಹೃದಯದಲ್ಲಿ ಎಂದು ರಾಹುಲ್ ಗಾಂಧಿ ಎಕ್ಸ್



ನಲ್ಲಿ ಪೋಸ್ಟ್ ಮಾಡಿದ್ದಾರೆ.

ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರ 39ನೇ ಪುಣ್ಯತಿಥಿಯ ಅಂಗವಾಗಿ ರಾಷ್ಟ್ರ ರಾಜಧಾನಿಯ ಶಕ್ತಿ ಸ್ಥಳದಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಪುಷ್ಪ ನಮನ ಸಲ್ಲಿಸಿದರು.

ಇದೇ ವೇಳೆ, ಭಾರತೀಯ ಜನತಾ ಪಕ್ಷದ ಸಂಸದ ವರುಣ್ ಗಾಂಧಿ ಅವರು ತಮ್ಮ ಅಜ್ಜಿಯನ್ನು ಸ್ಮರಿಸಿಕೊಂಡರು, ಅವರು ನಿಜವಾಗಿಯೂ ರಾಷ್ಟ್ರ ಮಾತೆ ಎಂದು ಬಣ್ಣಿಸಿದರು. ಸಾಟಿಯಿಲ್ಲದ ಧೈರ್ಯ ಮತ್ತು ಹೋರಾಟದ ಸಂಕೇತ ಮತ್ತು ಪ್ರಜಾಸತ್ತಾತ್ಮಕ ಸಮಾಜವಾದದ ಪ್ರವರ್ತಕರಾಗಿದ್ದ ನನ್ನ ಅಜ್ಜಿ ದಿವಂಗತ ಇಂದಿರಾಗಾಂಧಿ ಅವರ ಪುಣ್ಯತಿಥಿಯಂದು ಅವರಿಗೆ ನಮನಗಳು ಎಂದು ವರುಣ್ ಗಾಂಧಿ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳುವ ಸಂಕಲ್ಪದೊಂದಿಗೆ, ನೀವು ಮಾತೃತ್ವದ ಅತ್ಯಂತ ಸರಳ ಮತ್ತು ಸೌಮ್ಯವಾದ ಮೃದುತ್ವವನ್ನು ಹೊಂದಿದ್ದೀರಿ. ನೀವು ನಿಜವಾಗಿಯೂ ರಾಷ್ಟ್ರದ ಮಾತೆ ಎಂದು ಅವರು ಸ್ಮರಿಸಿದ್ದಾರೆ. ರಾಜಸ್ಥಾನ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಕೂಡ ಭಾರತದ ಮಾಜಿ ಪ್ರಧಾನಿಗೆ ಗೌರವ ಸಲ್ಲಿಸಿದರು.

ಕಾಂಗ್ರೆಸ್ ಸಂಸದ ಶಶಿ ತರೂರ್ ಅವರು ಭಾರತದ ಮಾಜಿ ಪ್ರಧಾನಿ ಅವರ ಪುಣ್ಯತಿಥಿಯಂದು ಅವರೊಂದಿಗಿನ ಮೊದಲ ಭೇಟಿಯನ್ನು ನೆನಪಿಸಿಕೊಂಡಿದ್ದಾರೆ. ನಾನು ಅವರನ್ನು ವಿದ್ಯಾರ್ಥಿ ನಾಯಕಿಯಾಗಿ 1975 ರಲ್ಲಿ ದೆಹಲಿ ವಿಶ್ವವಿದ್ಯಾನಿಲಯದಿಂದ ನಮ್ಮ ಹತ್ತಾರು ಜನರೊಂದಿಗೆ ಪ್ರಧಾನಿ ಅವರ ಮನೆಯಲ್ಲಿ ಚರ್ಚಿಸಿದಾಗ ನಾನು ಅವರನ್ನು ಮೊದಲು ಭೇಟಿಯಾದೆ. ಎರಡು ತಿಂಗಳ ನಂತರ ನಾನು ಅವರನ್ನು ಸ್ವಿಸ್ಗೆ ಸಂದರ್ಶನ ಮಾಡಲು ಸಾಧ್ಯವಾಯಿತು. ಯುವ ನಿಯತಕಾಲಿಕೆ (ಚಿತ್ರ) ತಿರುವನಂತಪುರದಲ್ಲಿ ಅವರ ನೆನಪಿಗಾಗಿ ಗೌರವ ಸಲ್ಲಿಸುತ್ತಿದ್ದೇನೆ ಎಂದು ಅವರು ಎಕ್ಸ್ನಲ್ಲಿ ಪೋಸ್ಟ್ ಮಾಡಿದ್ದಾರೆ.




# ಜಿಲ್ಲೆಯ ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳ ಸಭೆ

## ಹಂಗಾಮು ಆರಂಭಿಸುವ ಮುಂಚೆ ದರ ಘೋಷಿಸಬೇಕು: ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಕಟ್ಟುನಿಟ್ಟಿನ ಸೂಚನೆ

ಬೆಳಗಾವಿ: ಜಿಲ್ಲೆಯ ಅನೇಕ ಕಾರ್ಖಾನೆಗಳು ದರ ಘೋಷಣೆ ಮಾಡದೇ ಕಬ್ಬು ನುರಿಸುವ ಹಂಗಾಮು ಆರಂಭಿಸಿರುವುದರಿಂದ ರೈತರು ಆತಂಕಕ್ಕೆ ಒಳಗಾಗಿದ್ದಾರೆ.ಕಳೆದ ಸಭೆಯಲ್ಲಿ ತಮಗೆ ಕಟ್ಟು ನಿಟ್ಟಾಗಿ ನಿರ್ದೇಶನ ಸಹ ನೀಡಲಾಗಿತ್ತು. ಈಗಾಗಲೇ ಕಾರ್ಖಾನೆಯವರು ಕಬ್ಬು ಹಂಗಾಮು ಆರಂಭಿಸಿರುವ ಮತ್ತು ಇನ್ನು ಮುಂದೆ ಹಂಗಾಮು ಆರಂಭಿಸುವ ಕಾರ್ಖಾನೆಗಳು ತಕ್ಷಣವೇ ಕಡ್ಡಾಯವಾಗಿ ರೈತರಿಗೆ ಪ್ರತಿ ಟನ್ನ ಕಬ್ಬಿಗೆ ನೀಡಬೇಕಾದ ದರ ಘೋಷಣೆ ಮಾಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪ್ರಸಕ್ತ ಸಾಲಿನ ಕಬ್ಬು ನುರಿಸುವ ಹಂಗಾಮು ಪ್ರಾರಂಭಿಸುವ ಕುರಿತು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ (ಅ.31) ನಡೆದ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ನವೆಂಬರ್ 1 ರ ಬಳಿಕ ಹಂಗಾಮು ಆರಂಭಿಸಲು ತಿಳಿಸಲಾಗಿತ್ತು. ಆದರೆ ಸರಕಾರದ ಅನುಮತಿಯ ಪ್ರಕಾರ ಕೆಲವು ಕಾರ್ಖಾನೆಗಳು ಈಗಾಗಲೇ ಕಬ್ಬು ನುರಿಸುವ ಹಂಗಾಮು ಆರಂಭಿಸಿವೆ. ಆದರೆ ಅನೇಕ ಕಾರ್ಖಾನೆಗಳು ಇದುವರೆಗೆ ಎಫ್ ಆರ್ ಪಿ ದರದಲ್ಲಿ ರೈತರಿಗೆ ನೀಡುವ ಮೊತ್ತ ಹಾಗೂ ಊ&ಖಿ ಮೊತ್ತವನ್ನು ಘೋಷಿಸಿರುವುದಿಲ್ಲ ಎಂದು ತಿಳಿಸಿದರು.

ಹಿಂದಿನ ಸಾಲಿನ ಕಬ್ಬು ನುರಿಸಿದ ಕಾರ್ಖಾನೆಗಳು ಎಫ್.ಅರ್ಪಿ. ಮೇಲೆ ಘೋಷಿಸಿರುವ ಹೆಚ್ಚುವರಿ ದರವನ್ನು ಕಡ್ಡಾಯವಾಗಿ ಪಾವತಿಸಬೇಕು. ಕೆಲ ಕಾರ್ಖಾನೆಗಳು ಕಳೆದ ವರ್ಷ ಪ್ರಕಟಿಸಿರುವ ಹೆಚ್ಚುವರಿ ಮೊತ್ತವನ್ನು 2 ನೇ ಕಂತಾಗಿ ಇದುವರೆಗೆ ಪಾವತಿಸಿರುವುದಿಲ್ಲ. ಇದರಿಂದ ರೈತರಿಗೆ ಅನ್ಯಾಯವಾಗುತ್ತಿದೆ ಎಂದರು.



ಹಂಗಾಮು ಆರಂಭಿಸುವ ಮೊದಲು ಕಾರ್ಖಾನೆಯ ಆಡಳಿತ ಮಂಡಳಿ ಸಭೆಯಲ್ಲಿ ಎಫ್.ಆರ್ಪಿ. ದರದಲ್ಲಿ ರೈತರಿಗೆ ನೀಡುವ ಮೊತ್ತ ಪ್ರತಿ ಟನ್ನಿಗೆ ಘೋಷಣೆ ಮಾಡಲು ಅನುಮೋದನೆ ಪಡೆದುಕೊಂಡು ಅದನ್ನು ರೈತರಿಗೆ ಮುಂಚಿತವಾಗಿಯೇ ತಿಳಿಸಿದ ಬಳಿಕವೇ ಹಂಗಾಮು ಆರಂಭಿಸಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

ಮುಂದುವರೆದು ಕಬ್ಬು ನಿಯಂತ್ರಣ ಆದೇಶ ಪ್ರಕಾರ ರೈತರಿಗೆ ಕಬ್ಬು ಸರಬರಾಜು ಮಾಡಿದ ಹದಿನೈದು ದಿನಗಳಲ್ಲಿ ಬಿಲ್ ಪಾವತಿಸಲು ಸೂಚನೆ:

ಕಬ್ಬು ಕಟಾವು ಮಾಡಿದ ಹದಿನೈದು ದಿನಗಳಲ್ಲಿ ರೈತರಿಗೆ ನಿಯಮಾನುಸಾರ ಕಬ್ಬಿನ ಹಣ ಪಾವತಿಸಬೇಕು. ಅಳತೆ ಮತ್ತು ತೂಕ ವ್ಯವಸ್ಥೆ ಪಾರದರ್ಶಕವಾಗಿರಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ತೂಕ ಮತ್ತು ಅಳತೆಯ ಬಗ್ಗೆ ಕಬ್ಬು ಪೂರೈಕೆದಾರ ರೈತರಿಗೆ ವಿಶ್ವಾಸ ಮೂಡಿಸಬೇಕು. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಅನೀರಿಕ್ಷಿತ ಭೇಟಿ ನೀಡಿ ಪರಿಶೀಲನೆ ಕೈಗೊಳ್ಳಬೇಕು.

ಪ್ರತಿ ಕಾರ್ಖಾನೆಯ ತೂಕ ಮತ್ತು ಅಳತೆ ವ್ಯವಸ್ಥೆಯನ್ನು ಪರಿಶೀಲಿಸಲು ಅನುಕೂಲವಾಗುವಂತೆ ಕಂದಾಯ, ಪೊಲೀಸ್ ಅಧಿಕಾರಿಗಳನ್ನು ಒಳಗೊಂಡ ತಾಲ್ಲೂಕು ಮಟ್ಟದಲ್ಲಿ ತಂಡಗಳನ್ನು ರಚಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ್ ಗುಳೇದ್, ಇತ್ತೀಚೆಗೆ ನಡೆದ ಕಾರ್ಖಾನೆ ಮಾಲೀಕರ ಸಭೆಯಲ್ಲಿ ನಿರ್ಧರಿಸಿದಂತೆ ಹಂಗಾಮು ಆರಂಭಿಸುವ ಮುಂಚೆ ದರ ಘೋಷಣೆ ಮಾಡಬೇಕಿತ್ತು. ಆದರೆ ಕೆಲವರು ದರ ಘೋಷಿಸದೇ ಹಂಗಾಮು ಆರಂಭಿಸಿರುವುದರ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ್ ಕಂಕಣವಾಡಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ, ತೂಕ ಮತ್ತು ಅಳತೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು. ಜಿಲ್ಲೆಯ ಎಲ್ಲ ಕಾರ್ಖಾನೆಗಳ ಪ್ರತಿನಿಧಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಅಧಿಕೃತ ಜಮೀನುಗಳಿಗೆ ನೀರು ಒದಗಿಸುವಂತೆ ಒತ್ತಾಯಿಸಿ ಮನವಿ

ಸಿರುಗುಪ್ಪ: ನಗರದ ತಾಲೂಕು ಕಛೇರಿಯಲ್ಲಿ ತೆಕ್ಕಲಕೋಟೆ ಪಟ್ಟಣದಲ್ಲಿ ಅನಧಿಕೃತ ನೀರಾವರಿ ಸೌಲಭ್ಯಕ್ಕಾಗಿ ರಾಜಾರೋಷವಾಗಿ ಕಾಲುವೆಗೆ ಹಾಕಿರುವ ಪೈಪ್ ಮತ್ತು ಮೋಟಾರುಗಳನ್ನು ಜಪ್ತಿ ಮಾಡಿ ಅಧಿಕೃತ ಜಮೀನುಗಳಿಗೆ ನೀರಾವರಿ ಕಲ್ಪಿಸುವಂತೆ ಒತ್ತಾಯಿಸಿ ತೆಕ್ಕಲಕೋಟೆ ಪಟ್ಟಣದ ರೈತರಿಂದ ತಹಶೀಲ್ದಾರ್ ಹೆಚ್.ವಿಶ್ವನಾಥ ಅವರಿಗೆ ಮನವಿ ಸಲ್ಲಿಸಲಾಯಿತು.

ರೈತರಾದ ಬಂದೇನವಾಜ್, ಪಿ.ಎಮ್. ಜ್ಞಾನೇಂದ್ರಸ್ವಾಮಿ ಮಾತನಾಡಿ ಕಾಲುವೆಯ ಮೇಲ್ಭಾಗದಲ್ಲಿನ ಕೆಲವು ರೈತರು



ಅನಧಿಕೃತವಾಗಿ ವಿದ್ಯುತ್ ಮೋಟಾರ್, ಡೀಸೆಲ್ ಪಂಪ್‌ಗಳು, ಹಾಗೂ ರಾತ್ರೋ ರಾತ್ರಿ ಕಾಲುವೆಗೆ ಕಿಂಡಿಕೊರೆದು ತಮ್ಮ ಜಮೀನುಗಳಿಗೆ ನೀರು ಹರಿಸುತ್ತಿರುವ ಅನಧಿಕೃತ ವ್ಯಕ್ತಿಗಳಿಂದಾಗಿ ಕಾಲುವೆ ನೀರಾವರಿಗೆ ಅಧಿಕೃತವಿರುವ ನಮ್ಮ ಜಮೀನುಗಳಿಗೆ ನೀರು ಇಲ್ಲದಂತಾಗಿದೆ.

ಈ ಬಗ್ಗೆ ನೀರಾವರಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಸುರೇಶ್ ಪೂಜಾರ್ ಅವರಿಗೆ ಮೂರ್‍ನಾಲ್ಕು ವರ್ಷಗಳಿಂದ ದೂರು ಸಲ್ಲಿಸಿದರೂ ಯಾವುದೇ ಕ್ರಮ ಜರುಗಿಸದೇ ನಿರ್ಲಕ್ಷ್ಯವಹಿಸುತ್ತಿದ್ದಾರೆ. ಅಲ್ಲದೇ ನೀರು ಬರದಿದ್ದಲ್ಲಿ ನಾನೇನು ಮಾಡಲಿ ಮೇಲಾಧಿಕಾರಿಗಳನ್ನು ಸಂಪರ್ಕಿಸುವಂತೆ ಉಡಾಫೆ ಉತ್ತರ ನೀಡುತ್ತಿದ್ದಾರೆ.

ಕಳೆದ ಕೆಲವು ದಿನಗಳ ಹಿಂದೆ ಎ.ಎಸ್.ಐ ಲಕ್ಷ್ಮಣ್ ಅವರು ಗಸ್ತು ತಿರುಗುವ ವೇಳೆ ಕಾಲುವೆ ಕಿಂಡಿಯಿಂದ ನೀರು ಹರಿಸುತ್ತಿದ್ದ ವ್ಯಕ್ತಿ ಪರಾರಿಯಾಗಿದ್ದು, ದ್ವಿಚಕ್ರ ವಾಹನ ಸಂಖ್ಯೆ ಕೆಎ-34 ಇಪಿ-8806 ಸಂಖ್ಯೆಯ ವಾಹನವನ್ನು ಜಪ್ತಿಮಾಡಲಾಗಿದೆ ಯಾದರೂ ಆ ವ್ಯಕ್ತಿಯ ಹುಡುಕಾಟವಾಗಲೀ ಬಂಧನದ ಕ್ರಮವಾಗಲೀ ಜರುಗಿಸಿಲ್ಲ.

ತಾವುಗಳು ಪೋಲೀಸ್ ಮುಖೇನವಾಗಲೀ ಸಿಬ್ಬಂದಿಗಳಿಂದಾಗಲೀ ತತ್‌ಕ್ಷಣದಲ್ಲೇ ಅನಧಿಕೃತ ಪಂಪ್‌ಸೆಟ್‌ಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ಸೂಕ್ತ ಬಂದೋಬಸ್ತ್‌ನಿಂದ ನೀರಾವರಿ ಸೌಲಭ್ಯ ಕಲ್ಪಿಸಬೇಕು ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಕಛೇರಿ ಮುಂಭಾಗದಲ್ಲಿ ಧರಣಿ ನಡೆಸಲಾಗುವುದೆಂದರು.

ಇದೇ ವೇಳೆ ರೈತರಾದ ಬಸವರಾಜ, ಕೆ.ಆರ್.ವೀರೇಶಪ್ಪ, ಹುಸೇನಿ, ಎಸ್.ನಾಗರಾಜ, ಶಾಷಾವಲಿ ಇನ್ನಿತರಿದ್ದರು.

## ಜವಾಹರ ನವೋದಯ ವಿದ್ಯಾಲಯ, ಧಾರವಾಡ 9 ಮತ್ತು 11 ನೇ ತರಗತಿ ಪ್ರವೇಶ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಧಾರವಾಡ: ಧಾರವಾಡ ಜಿಲ್ಲೆಯ ಜವಾಹರ ನವೋದಯ ವಿದ್ಯಾಲಯದ 2024-25 ನೇ ಸಾಲಿನ 9 ಹಾಗೂ 11 ನೇ ತರಗತಿಗಳಿಗೆ ಪ್ರವೇಶ ಪಡೆಯಲು ಆನ್ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸುವ ಅವಧಿಯನ್ನು ನವೆಂಬರ್ 07, 2023 ರವರೆಗೆ ವಿಸ್ತರಿಸಲಾಗಿದೆ.

8 ಹಾಗೂ 10 ನೇ ತರಗತಿಯಲ್ಲಿ ಓದುತ್ತಿರುವ ಧಾರವಾಡ ಜಿಲ್ಲೆಯ ಅರ್ಹ ವಿದ್ಯಾರ್ಥಿಗಳು ವೆಬ್ ಸೈಟ್ www.navodaya.gov.in ಮೂಲಕ, ನವೆಂಬರ್ 07, 2023 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ:7411533747, 9108367164, 9481929952 7337766555 ಗೆ ಸಂಪರ್ಕಿಸಬಹುದು ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅವ್ಯವಸ್ಥೆಯ ತಾಣವಾದ ತಾಳೂರು ಗ್ರಾಮ ಪಂಚಾಯಿತಿ ಕಾರ್ಯಾಲಯ



ಸಿರುಗುಪ್ಪ: ತಾಲೂಕಿನ ತಾಳೂರು ಗ್ರಾಮ ಪಂಚಾಯಿತಿ ಕಾರ್ಯಾಲಯದ ಆವರಣದಲ್ಲಿ ಸದಾಕಾಲ ಪ್ಲಾಸ್ಟಿಕ್, ಕಸ, ಮದ್ಯದ ತ್ಯಾಜ್ಯಗಳಿಂದ ಶುದ್ಧ ಪರಿಸರಕ್ಕೆ ಮಾರಕವಾಗಿ ಮಾಲಿನ್ಯದಿಂದ ಕೂಡಿತ್ತು.

ತಾಲೂಕು ಭಾಗದಿಂದ ಕೊನೆಯ ಹಾಗೂ ನೆರೆಯ ಆಂದ್ರದ ಗಡಿಭಾಗದಲ್ಲಿರುವ ಈ ಗ್ರಾಮವೂ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿದೆಂದರೆ ತಪ್ಪಾಗಲಾರದು. ಆಸ್ಪತ್ರೆಗೆ ಸೂಕ್ತ ತಡೆಗೋಡೆ ಇಲ್ಲದಿರುವುದರಿಂದ ಕೆಲವು ಕಿಡಿಗೇಡಿಗಳು ಅಲ್ಲಿಯೇ ಮಲ ಮೂತ್ರ ವಿಸರ್ಜನೆ ಮಾಡುತ್ತಿರುವುದು ಒಂದೆಡೆಯಾದರೆ ಪಂಚಾಯಿತಿ ಕಾರ್ಯಾಲಯಕ್ಕೆ ಸಂಬಂದಿಸಿದ ಶೌಚಾಲಯಗಳು ಬೀಗ ಹಾಕಿದ್ದರಿಂದ ಸಾರ್ವಜನಿಕರು ಎಲ್ಲೆಂದರಲ್ಲಿ ಮೂತ್ರ ವಿಸರ್ಜನೆ ಮಾಡುವಂತಾಗಿದೆ.

ಆಸ್ಪತ್ರೆಯಲ್ಲಿ ವೈದ್ಯರಿಲ್ಲದ ವೇಳೆ ಜಿಲ್ಲಾ ಕೇಂದ್ರಕ್ಕೆ ತೆರಳುವ ರೋಗಿಗಳಿಗೆ, ಉನ್ನತ ವ್ಯಾಸಂಗಕ್ಕೆ ತೆರಳುವ ವಿದ್ಯಾರ್ಥಿಗಳಿಗೆ, ಪ್ರಯಾಣಿಕರಿಗೆ ಗ್ರಾಮದಲ್ಲಿ ಒಂದು ಬಸ್ ನಿಲ್ದಾಣವಿಲ್ಲದೇ ಮಳೆ ಬಿಸಿಲಿನಲ್ಲಿ ಇಲ್ಲವೇ ಖಾಸಗಿಯವರ ಅಂಗಡಿ ಮುಂಗಟ್ಟುಗಳ ಮುಂದೆ ನಿಲ್ಲಬೇಕಾದ ಅನಿವಾರ್ಯತೆ ಎದುರಾಗಿದೆ.

ಸರಾಗವಾಗಿ ನೀರು ಹರಿಯುವ ಸೂಕ್ತ ಚರಂಡಿ ವ್ಯವಸ್ಥೆಯಿಲ್ಲದ ಕಾರಣ ಎಲ್ಲೆಂದರಲ್ಲೆ ಸೊಳ್ಳೆಗಳ ತಾಣವಾಗಿದ್ದರಿಂದ ಗ್ರಾಮಸ್ಥರಿಗೆ ತಾಪತ್ರಯ ತಪ್ಪದಾಗಿದೆ.

ಈ ಸಮಸ್ಯೆಗಳನ್ನು ಪರಿಹರಿಸುವ ಜವಾಬ್ದಾರಿ ಹೊತ್ತ ಅಭಿವೃದ್ದಿ ಅಧಿಕಾರಿಗಳಾದ ಮಹಮದ್ ಖದೀರ್ ಅವರು ಪ್ರತಿಕ್ರಿಯಿಸಿ ಏನು ಮಾಡುವುದು ಎಷ್ಟು ಸ್ವಚ್ಚಗೊಳಿಸಿದರೂ ಕಸ ಬೀಳುತ್ತಿರುತ್ತದೆ, ಚರಂಡಿ ತುಂಬಿ ಹರಿಯುತ್ತೆ, ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಇದು ಸಾಮಾನ್ಯವಾಗಿದೆಂದು ಹಾರಿಕೆ ಉತ್ತರ ನೀಡಿದರಲ್ಲದೇ ಸರ್ಕಾರದಿಂದ ಅನುದಾನವಿಲ್ಲ ದಂತಾಗಿದೆ ಮುಂದೇನಾದರೂ ಅನುದಾನ ಬಂದಲ್ಲಿ ಬಸ್‌ನಿಲ್ದಾಣ, ಆಸ್ಪತ್ರೆಗೆ ತಡೆಗೋಡೆ ನಿರ್ಮಿಸಲಾಗುವುದೆಂದರು.

## ದಿನದ 24 ಗಂಟೆ ನೀರು ಪೂರೈಕೆ ಯಶಸ್ವಿ ಅನುಗಣ್ಣನಕ್ಕಾಗಿ ಕೇಂದ್ರ ಸರಕಾರದ ವಿಶೇಷ ಪ್ರಶಸ್ತಿ ಪಡೆದ ಕರ್ನಾಟಕದ ಏಕೈಕ ಪಟ್ಟಣ ಪಂಚಾಯತಿ ಅಳ್ನಾವರ




ಧಾರವಾಡ: ಕೇಂದ್ರ ಸರಕಾರದ ವಸತಿ ಮತ್ತು ನಗರ ವ್ಯವಹಾರ ಮಂತ್ರಾಲಯವು ನವದೆಹಲಿಯ ಹೆಬಿಟೇಟ್ ಸೆಂಟರ್ ದಲ್ಲಿರುವ ನ್ಯಾಷನಲ್ ಅರ್ಬನ್ ಕಾನ್ ಕ್ಲೇವ್‌ನಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ನಗರ ಕಲಿಕಾ ವೇದಿಕೆಯಲ್ಲಿನ ಸಮಾರಂಭದಲ್ಲಿ ಬೆಳಿಗ್ಗೆ ಲೋಕಲ್ ಸಲ್ಯೂಷನ್ ಇನ್ ರಿಜಿನಲ್ ಲ್ಯಾಂಗ್ವೇಜ್ ಪ್ರವರ್ಗದಲ್ಲಿ ದಿನದ 24 ಗಂಟೆ ನೀರು ಪೂರೈಸುವ ಯೋಜನೆ ಯಶಸ್ವಿ ಅನುಗಣ್ಣನಕ್ಕಾಗಿ ಅಳ್ನಾವರ ಪಟ್ಟಣ ಪಂಚಾಯತಿಗೆ ವಿಶೇಷ ಪ್ರಶಸ್ತಿಯನ್ನು ನೀಡಿ, ಗೌರವಿಸಲಾಯಿತು.

ಕೇಂದ್ರ ಸರ್ಕಾರದ ವಸತಿ ಮತ್ತು ನಗರ ವ್ಯವಹಾರ ಮಂತ್ರಾಲಯದ ಜಂಟಿ ಕಾರ್ಯದರ್ಶಿ ಕುನಾಲ್ ಕುಮಾರ್, ಯುನಿಸೆಫ್ ಸೋಶಿಯಲ್ ಪಾಲಿಸಿ ಮುಖ್ಯಸ್ಥ ಹ್ಯೂನ್ ಹಿ ಬನ್, ಎನ್.ಡಿ.ಎಮ್.ಸಿ. ನಿರ್ದೇಶಕ ಮತ್ತು ಹಣಕಾಸು ಸಲಹೆಗಾರ ಪುಷ್ಕಲ್ ಉಪಾಧ್ಯಯ ಅವರು ಇಂದಿನ ಸಮಾರಂಭದಲ್ಲಿ ಪ್ರಶಸ್ತಿ ವಿತರಿಸಿದರು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಅಳ್ನಾವರ ಪಟ್ಟಣ ಪಂಚಾಯತ್ ಆಡಳಿತಾಧಿಕಾರಿ ಹಾಗೂ ಅಳ್ನಾವರ ತಹಸಿಲ್ದಾರ ಬಸವರಾಜ್ ಬೆಣ್ಣಿಶಿರೂರ, ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕ ರಮೇಶ್ ಬಿ.ಎಸ್. ಹಾಗೂ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಪ್ರಕಾಶ್ ಮಗದುಮ್ ಅವರು ಪ್ರಶಸ್ತಿಯನ್ನು ಸ್ವೀಕರಿಸಿದರು.

ಅಳ್ನಾವರ ಪಟ್ಟಣ ಪಂಚಾಯಿತಿಯು ಈ ಪ್ರಶಸ್ತಿಯನ್ನು ಪಡೆದ ಕರ್ನಾಟಕದ ಏಕೈಕ ಪಟ್ಟಣಪಂಚಾಯಿತಿಯಾಗಿದೆ. ಇದು ರಾಷ್ಟ್ರೀಯ ಮಟ್ಟದಲ್ಲಿ ಧಾರವಾಡ ಜಿಲ್ಲೆಗೆ ಸಂದ ಗೌರವವಾಗಿದೆ.

## ಅಂಗನವಾಡಿ ಸಹಾಯಕಿಯರ ಆಯ್ಕೆಗಾಗಿ ಶೀಘ್ರದಲ್ಲಿ ಆನ್ಲೈನ್ ಮೂಲಕ ಅರ್ಜಿ ಆಹ್ವಾನ

ಧಾರವಾಡ: ಶಿಶು ಅಭಿವೃದ್ಧಿ ಯೋಜನೆಯ ಹುಬ್ಬಳ್ಳಿ-ಧಾರವಾಡ (ಶಹರ) ವ್ಯಾಪ್ತಿಯಲ್ಲಿ ಖಾಲಿ ಇರುವ 113 ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಗೌರವಸೇವೆಗಾಗಿ ಆಫ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದನ್ನು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಾರ್ಯದರ್ಶಿಗಳ ಆದೇಶದಂತೆ, ಆಫ್ಲೈನ್ ಮೂಲಕ ಆಹ್ವಾನಿಸಿರುವ ಅರ್ಜಿ ಪ್ರಕ್ರಿಯೆಯನ್ನು ರದ್ದುಪಡಿಸಲಾಗಿದೆ. ಮತ್ತು ಅವರ ನಿರ್ದೇಶನದಂತೆ ಆನ್ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗುವುದು.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಆಯ್ಕೆ ಸಮಿತಿ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿಗಳು ಆಫ್ಲೈನ್ ಮೂಲಕ ಕರೆದಿರುವ ಹಿಂದಿನ ಪ್ರಕಟಣೆಯನ್ನು ರದ್ದುಪಡಿಸಿ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅತೀ ಶೀಘ್ರದಲ್ಲಿ ಕ್ರಮ ಕೈಗೊಳ್ಳಲಿದ್ದಾರೆ ಎಂದು ಹುಬ್ಬಳ್ಳಿ-ಧಾರವಾಡ ಶಹರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.02 ಮತ್ತು 03 ರಂದು ವಿದ್ಯುತ್ ವ್ಯತ್ಯಯ: ಸಹಕರಿಸಲು ಮನವಿ

ಶಿವಮೊಗ್ಗ: ಶಿವಮೊಗ್ಗ ಮೆಸ್ಕಾಂ ಗ್ರಾಮೀಣ ಉಪವಿಭಾಗ ಮಾಚೇನಹಳ್ಳಿ 110/11 ಕೆವಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜಾರಾಗುವ ಮಾರ್ಗಗಳ ವ್ಯಾಪ್ತಿಯ ಬಿದರೆ, ನಿದಿಗೆ, ಓತಿಘಟ್ಟ, ಸಿದ್ದರಗುಡಿ, ಹಾರೇಕಟ್ಟೆ, ಸೋಗಾನೆ, ಆಚಾರಿಕ್ಯಾಂಪ್, ಹೊಸೂರು ರೆಡ್ಡಿಕ್ಯಾಂಪ್, ದುಮ್ಮಳ್ಳಿ, ಶುಗರ್ ಕಾಲೋನಿ ಹಾಗೂ ಸುತ್ತಮುತ್ತಲಿ ಗ್ರಾಮಗಳಲ್ಲಿ ನ.02 ಮತ್ತು 03 ರಂದು ಮಧ್ಯಾಹ್ನ 12.30 ರಿಂದ ಸಂಜೆ 6.00 ರವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

## ರೈಲುಗಳಲ್ಲಿ ದಹನಕಾರಿ ವಸ್ತುಗಳನ್ನು ಸಾಗಿಸದಂತೆ ಜಾಗೃತಿ ಕಾರ್ಯಕ್ರಮ

ಶಿವಮೊಗ್ಗ: ದೀಪಾವಳಿ ಹಬ್ಬ, ಹರಿದಿನಗಳು ಮತ್ತು ಇತ್ತೀಚಿನ ಅಗ್ನಿ ಅವಘಡಗಳನ್ನು ಗಮನದಲ್ಲಿಟ್ಟುಕೊಂಡು ರೈಲ್ವೆ ಮಂಡಳಿ, ನವದೆಹಲಿ ಮತ್ತು ಆರ್‌ಪಿಎಫ್ ಹೆಡ್ ಕ್ವಾರ್ಟರ್ಸ್‌ನ ನಿರ್ದೇಶನದಂತೆ ದಹಿಸುವ ವಸ್ತುಗಳನ್ನು ಸಾಗಿಸುವುದರ ವಿರುದ್ಧ ವಿಶೇಷ ಡ್ರೈವ್ ಮತ್ತು ಸಾಮಾನ್ಯ ಜಾಗೃತಿಯನ್ನು ಇಂದು ಶಿವಮೊಗ್ಗ ರೈಲ್ವೇ ಸ್ಟೇಷನ್ನಲ್ಲಿ ಪೋಸ್ಟ್ ಕಮಾಂಡರ್, ರೈಲ್ವೆ ಪ್ರೊಟೆಕ್ಷನ್ ಫೋರ್ಸ್, ಶಿವಮೊಗ್ಗ ಇವರ ವತಿಯಿಂದ ಆಯೋಜಿಸಲಾಗಿದೆ.

ರೈಲುಗಳಲ್ಲಿ ಅಥವಾ ರೈಲ್ವೇ ಆವರಣದಲ್ಲಿ




ಯಾವುದೇ ದಹನಕಾರಿ ವಸ್ತುಗಳು, ಪಟಾಕಿಗಳನ್ನು ಕೊಂಡೊಯ್ಯದಂತೆ ತಿಳಿವಳಿಕೆ ಮೂಡಿಸುವ ಮೂಲಕ ರೈಲು ನಿಲ್ದಾಣ ಮತ್ತು ರೈಲುಗಳಲ್ಲಿ ಪ್ರಯಾಣಿಕರಿಗೆ ಅರಿವು ಮೂಡಿಸಲಾಯಿತು.

ರೈಲುಗಳಲ್ಲಿ ಪಟಾಕಿ, ಸಿಲೆಂಡರ್ ಗ್ಯಾಸ್ ಇತರೆ ದಹನಕಾರಿ ವಸ್ತುಗಳನ್ನು ಸಾಗಿಸುವುದು ಕಂಡು ಬಂದರೆ ರೈಲ್ವೇ ಕಾಯ್ದೆ 164 ವಿಧಿಯ ಪ್ರಕಾರ 3 ವರ್ಷ ಜೈಲು ಶಿಕ್ಷೆ ಅಥವಾ ರೂ.1000 ದವರೆಗೆ ದಂಡ ಅಥವಾ ಎರಡನ್ನೂ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಲಾಯಿತು.

ಈ ವೇಳೆ ಆರ್‌ಪಿಎಫ್ ಇನ್ಸ್ಪೆಕ್ಟರ್ ಬಿ ಎನ್ ಕುಬೇರಪ್ಪ, ಸಬ್ ಇನ್ಸ್ಪೆಕ್ಟರ್ ಸಂತೋಷ್ ಗಾಂವ್ಕರ್ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ರಾಷ್ಟ್ರೀಯ ಏಕತಾ ದಿವಸ-ಪ್ರತಿಜ್ಞಾ ವಿಧಿ ಸ್ವೀಕಾರ



ಶಿವಮೊಗ್ಗ: ದಿವಂಗತ ಶ್ರೀ ಸರ್ದಾರ್ ವಲ್ಲಭಬಾಯ್ ಪಟೇಲ್ ಜನ್ಮದಿನದ ಪ್ರಯುಕ್ತ ಆಚರಿಸಲಾದ 'ರಾಷ್ಟ್ರೀಯ ಏಕತಾ ದಿವಸ'ದ ಪ್ರತಿಜ್ಞಾ ವಿಧಿಯನ್ನು ಇಂದು ಜಿಲ್ಲಾಡಳಿತ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳಾದ ಡಾ.ಸೆಲ್ವಮಣಿ ಆರ್ ಇವರ ಸಮ್ಮುಖದಲ್ಲಿ ಸ್ವೀಕರಿಸಲಾಯಿತು.

ಅಪರ ಜಿಲ್ಲಾಧಿಕಾರಿ ಸಿದ್ದಲಿಂಗ ರೆಡ್ಡಿ ಪ್ರತಿಜ್ಞಾ ವಿಧಿ ಬೋಧಿಸಿದರು, ಜಿಲ್ಲಾಡಳಿತ ಕಚೇರಿಯ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

## ಅಪರಿಚಿತ ವ್ಯಕ್ತಿ ಸಾವು: ವಾರಸ್ಸುದಾರರ ಪತ್ತೆಗೆ ಮನವಿ

ಶಿವಮೊಗ್ಗ: ದೊಡ್ಡಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯ ಸರ್ಕಾರಿ ಬಸ್ ನಿಲ್ದಾಣದ ಫುಟ್ ಪಾತ್ನ ಪಕ್ಕದಲ್ಲಿ ಬಿದ್ದಿದ್ದ ಸುಮಾರರು 40-45 ವರ್ಷದ ಅಪರಿಚಿತ ವ್ಯಕ್ತಿಯನ್ನು ಸಾರ್ವಜನಿಕರು ಅಂಬುಲೆನ್ಸ್ ಮೂಲಕ ಮೆಗ್ಗಾನ ಆಸ್ಪತ್ರೆಗೆ ಸೇರಿಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾನೆ. ಮೃತದೇಹವನ್ನು ಆಸ್ಪತ್ರೆಯ ಶವಾಗಾರದಲ್ಲಿರಿಸಲಾಗಿದೆ. ಸುಮಾರು 5.10ಅಡಿ ಎತ್ತರ, ಕಪ್ಪು ಮೈಬಣ್ಣ, ದುಂಡುಮುಖ, ಸಾಧಾರಣ ಮೈಕಟ್ಟು ಹೊಂದಿರುವ ಈತ ಬಿಳಿನೀಲಿ ಮಿಶ್ರಿತ ಬಣ್ಣದ ಅರ್ಧ ತೋಳಿನ ಶರ್ಟ್ ಹಾಗೂ ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ.

ಈ ಮೃತ ವ್ಯಕ್ತಿಯ ಸಂಬಂಧಿಕರ/ವಾರಸ್ಸುದಾರರ ಪತ್ತೆಯಾದಲ್ಲಿ ಶಿವಮೊಗ್ಗ ದೊಡ್ಡಪೇಟೆ ಪೊಲೀಸ್ ಠಾಣೆ ದೂ.ಸಂ.: 08182-261414/ 9611761255 ಗಳನ್ನು ಸಂಪರ್ಕಿಸಿ ಮಾಹಿತಿ ನೀಡುವಂತೆ ಪೊಲೀಸ್ ಪ್ರಕಟಣೆ ತಿಳಿಸಿದೆ.

## ರಾಜ್ಯೋತ್ಸವದಲ್ಲಿ 3 ರಿಂದ 5 ಲಕ್ಷ ಜನ ಭಾಗವಹಿಸುವ ನಿರೀಕ್ಷೆ



ಬೆಳಗಾವಿ: ನವೆಂಬರ್ 1 ರಂದು ಕರ್ನಾಟಕ ರಾಜ್ಯೋತ್ಸವವನ್ನು ವಿಶಿಷ್ಟ ರೀತಿಯಲ್ಲಿ ಆಚರಿಸಲಾಗುತ್ತಿದ್ದು, ಬೆಳಗಾವಿ ನಗರದಲ್ಲಿ ನಡೆಯುವ ರಾಜ್ಯೋತ್ಸವ ಸಂಭ್ರಮದಲ್ಲಿ ಅಂದಾಜು 3 ರಿಂದ 5 ಲಕ್ಷ ಜನರು ಭಾಗವಹಿಸುವ ನಿರೀಕ್ಷೆಯಿದೆ.

ಈ ಬಾರಿ ಕೂಡ ಕರಾಳ ದಿನಾಚರಣೆಗೆ ಯಾವುದೇ ರೀತಿಯ ಅನುಮತಿ ನೀಡಿರುವುದಿಲ್ಲ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ರಾಜ್ಯೋತ್ಸವ ಕುರಿತು ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ (ಅ.31) ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ಪ್ರತಿವರ್ಷದಂತೆ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಮೆರವಣಿಗೆಯಲ್ಲಿ ಭಾಗವಹಿಸುವವರಿಗೆ ಮೂಲಸೌಕರ್ಯಗಳನ್ನು ಒದಗಿಸಲಾಗುವುದು ಎಂದರು.

ಜಿಲ್ಲೆಯ 25 ಜನರಿಗೆ ಗೌರವ ಸನ್ಮಾನ:

ಈ ಬಾರಿಯ ರಾಜ್ಯೋತ್ಸವದಲ್ಲಿ ಜಿಲ್ಲಾಡಳಿತದ ವತಿಯಿಂದ ಕನ್ನಡಪರ ಹೋರಾಟಗಾರರು ಹಾಗೂ ಮಾಧ್ಯಮ ಪ್ರತಿನಿಧಿಗಳು ಸೇರಿ ಒಟ್ಟಾರೆ 25 ಜನರನ್ನು ಗೌರವಿಸಿ ಸನ್ಮಾನಿಸಲಾಗುವುದು ಎಂದು ಜಿಲ್ಲಾಧಿಕಾರಿ ಪಾಟೀಲ ತಿಳಿಸಿದರು.

ರಾಜ್ಯೋತ್ಸವಸ ಮೆರವಣಿಗೆಯಲ್ಲಿ 75 ಸ್ತಬ್ಧಚಿತ್ರಗಳು ಭಾಗವಹಿಸಲಿವೆ. ಈ ಸಂಖ್ಯೆ ಇನ್ನೂ ಹೆಚ್ಚಾಗಲಿದೆ ಎಂದರು.

**ಜಿಲ್ಲಾ ಕ್ರೀಡಾಂಗಣದಲ್ಲಿ ಕನ್ನಡದ ಐದು ಹಾಡುಗಳು:**

ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಹುಯಿಲಗೋಳ ನಾರಾಯಣರಾಯರ "ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು", ಕುವೆಂಪು ಅವರ "ಎಲ್ಲಾದರು ಇರು ಎಂತಾದರು ಇರು", ದ.ರಾ.ಬೇಂದ್ರೆ ಅವರ "ಒಂದೇ ಒಂದೇ ಕರ್ನಾಟಕವೊಂದೇ", ಸಿದ್ದಯ್ಯ ಪುರಾಣಿಕ ಅವರ "ಹೊತ್ತಿತ್ತೋ ಹೊತ್ತಿತ್ತು ಕನ್ನಡದ ದೀಪ" ಹಾಗೂ ಚನ್ನವೀರ ಕಣವಿ ಅವರ "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಈ ಐದು ಹಾಡುಗಳನ್ನು ಹಾಡುವ ಮೂಲಕ ಕನ್ನಡಾಂಬೆಗೆ ಗೀತ ಗಾಯನದ ನಮನ ಸಲ್ಲಿಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿ 50 ವರ್ಷಗಳು ಪೂರ್ಣಗೊಂಡಿರುವ ಹಿನ್ನೆಲೆ ಯಲ್ಲಿ ಈ ವರ್ಷದ ಕನ್ನಡ ರಾಜ್ಯೋತ್ಸವವನ್ನು ವಿಶೇಷ ರೀತಿಯಲ್ಲಿ ಆಚರಿಸಲಾಗುತ್ತಿದ್ದು, ಸಾರ್ವಜನಿಕರು ಮನೆಗಳ ಮುಂದೆ ರಂಗೋಲಿ ಹಾಕಿ, ಗಾಳಿಪಟಗಳನ್ನು ಹಾರಿಸಿ, ಹಣತೆ ಹಚ್ಚುವ ಮೂಲಕ ಕನ್ನಡ ಜ್ಯೋತಿ ಬೆಳಗಿಸುವುದರೊಂದಿಗೆ ಸಂಭ್ರಮವನ್ನು ಹೆಚ್ಚಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಮನವಿ ಮಾಡಿಕೊಂಡಿದ್ದಾರೆ.

## ವೈದ್ಯಾಧಿಕಾರಿಗಳ ಹುದ್ದೆಗೆ ನೇರ ಸಂದರ್ಶನಕ್ಕೆ ಕರೆ

ಶಿವಮೊಗ್ಗ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ 8 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳಿಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದಲ್ಲಿ ಒಂದು ವರ್ಷದ ಅವಧಿಗೆ ರೋಷ್ಟರ್ ಮತ್ತು ಮೆರಿಟ್ ಆಧಾರದಲ್ಲಿ ನೇಮಕ ಮಾಡಿಕೊಳ್ಳಲು ಅರ್ಹ ಎಂ.ಬಿ.ಬಿಎಸ್ ಪದವೀಧರರಿಗೆ ನೇರ ಸಂದರ್ಶನವನ್ನು ಕರೆಯಲಾಗಿದೆ

ಆಸಕ್ತರು ದಿ:06/11/2023 ರಂದು ಬೆಳಗ್ಗೆ 11.00 ರಿಂದ ಮ.1.00 ರವರೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಬಿ.ಹೆಚ್.ರಸ್ತೆ ಶಿವಮೊಗ್ಗ ಇಲ್ಲಿ ತಮ್ಮ ವಿದ್ಯಾರ್ಹತೆ, ಹುಟ್ಟಿದ ದಿನಾಂಕ ಮತ್ತು ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳ ಒಂದು ಸೆಟ್ ನಕಲು ಮತ್ತು ಮೂಲಕ ಪ್ರತಿಗಳು ಹಾಗೂ ಇತ್ತೀಚಿನ ಎರಡು ಭಾವಚಿತ್ರಗಳೊಂದಿಗೆ ಹಾಜರಾಗುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08182-222382 ನ್ನು ಸಂಪರ್ಕಿಸುವುದು.

## ಡಿಪ್ಲೊಮ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ: ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ 2023-24 ನೇ ಶೈಕ್ಷಣಿಕ ಸಾಲಿನ ಒಂದು ವರ್ಷದ ಕೃಷಿ ಪರಿಕರಗಳ ವಿಸ್ತರಣಾ ಸೇವೆ ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

20 ವರ್ಷ ಮೇಲ್ಪಟ್ಟ ಎಸ್‌ಎಸ್‌ಎಲ್ಸಿ ಪಾಸಾದವರು ನ.28 ರೊಳಗೆ ಅರ್ಜಿಯನ್ನು ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕಚೇರಿಗೆ ಸಲ್ಲಿಸಬಹುದಾಗಿದೆ.

ಇದು 2 ಸೆಮಿಸ್ಟರ್‌ಗಳ ಕೋರ್ಸ್ ಆಗಿದ್ದು ರೂ.20,000/- ಶುಲ್ಕವಿದೆ. ವಿಶ್ವವಿದ್ಯಾಲಯದ ವೆಬ್ಸೈಟ್ uahs.edu.in ನಲ್ಲಿ ಅರ್ಜಿ ಪಡೆದು, ರಾಷ್ಟ್ರೀಕೃತ ಬ್ಯಾಂಕ್ನಲ್ಲಿ The Comptroller, KSNUAHS, Iruvakki, Shivamogga-577412 payabale at Shivamogga ಇವರ ಹೆಸರಿನಲ್ಲಿ ಸಾಮಾನ್ಯ ವರ್ಗದ ಅಭ್ಯರ್ಥಿಗಳು ರೂ.200/- ಹಾಗೂ ಎಸ್ಸಿ, ಎಸ್ಟಿ, ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು ರೂ.100/- ಗಳ ಡಿಡಿ ಜೊತೆಗೆ ಅರ್ಜಿ ಸಲ್ಲಿಸಬಹುದೆಂದು ಶಿವಮೊಗ್ಗದ ಇರುವಕ್ಕಿ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿಡಿಯಲ್ಲಿ ಡಿಕೆಶಿ ಕೈವಾಡವಿದೆ, ಇಲ್ಲವಾದಲ್ಲಿ ಶಾಸಕ ಸ್ಥಾನಕ್ಕೆ ರಾಜೀನಾಮೆ: ಸವಾಲೆಸೆದ ರಮೇಶ ಜಾರಕಿಹೊಳಿ

ಬೆಳಗಾವಿ: "ಸಿಡಿ ಫ್ಯಾಕ್ಟರೀ ಬಂದ ಆಗಬೇಕಾದರೆ ಸೂಕ್ತವಾಗಿ ಸಿಬಿಐ ತನಿಖೆಯಾಗಬೇಕು. ಸಿಡಿ ಕೇಸ್‌ನಲ್ಲಿ ಡಿಕೆಶಿ ಕೈವಾಡ ಇಲ್ಲವಾದಲ್ಲಿ ನಾನು ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡುತ್ತೇನೆ" ಎಂದು ಮಾಜಿ ಸಚಿವ ರಮೇಶ ಜಾರಕಿಹೊಳಿ ಅವರು ವಾಗ್ದಾಳಿ ನಡೆಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸುದ್ಧಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಲ್ಲ ಕಡೆ ಸಿಡಿ ಫ್ಯಾಕ್ಟರೀ ಇಟ್ಟುಕೊಂಡಿದ್ದಾರೆ. ವಿದೇಶದ ಮೂಲೆ- ಮೂಲೆಯಿಂದ ವಿಡಿಯೋ ವೈರಲ್ ಮಾಡಿದ್ದಾರೆ. ಸನ್ಮಾನ್ಯ ಡಿ.ಕೆ. ಶಿವಕುಮಾರ್ ಅವರು ಯಾರ ಜತೆ ಎಲ್ಲಿಂದ ಮಾತನಾಡಿದ್ದಾರೆ ಎಂಬುವ ಸೂಕ್ತ ದಾಖಲಾತಿ ನನ್ನ ಬಳಿ ಇದೆ. ಇದು ಸುಳ್ಳು ಎಂಬುವುದು ಅವರು ಸಾಬೀತು ಮಾಡಿದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆಂದು ಡಿಸಿಎಂ ಡಿಕೆಶಿ ಅವರಿಗೆ ಸವಾಲೆಸಿದರು.

ಗೂಂಡಾಗಳಿಂದ ಕಿಡಿಗೇಡಿ ಕೆಲಸ: ಸನ್ಮಾನ್ಯ ಡಿ.ಕೆ. ಶಿವಕುಮಾರ್ ಮೊದಲೇ ಕೊತ್ವಾಲ್ ರಾಮಚಂದ್ರನ ಶಿಷ್ಯ, ಗೂಂಡಾಗಳನ್ನು ಕಳಸಿ ನನ್ನ ಮನೆಗೆ ಅಶ್ಲೀಲ ಫೋಟೋ ಹಚ್ಚಿಸಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತರು ಈ ಕೆಲಸ ಮಾಡಿಲ್ಲ, ಇದು ಡಿಕೆಶಿ ಅವರ ಬೆಂಬಲಿತರ ಕೃತ್ಯ ಎಂದು ಆರೋಪಿಸಿದರು.



ಸಿಡಿ ಪ್ರಕರಣದಲ್ಲಿ ಅಪಮಾನ ಮಾಡಿದಾಗ, ಏನ್ ಬೇಕಾದರೂ ಮಾಡಬಹುದಿತ್ತು. ಎಲ್ಲವನ್ನು ತಾಳ್ಮೆಯಿಂದಲೇ ಸ್ವೀಕರಿಸಿದ್ದೇನೆ. 4 ವರ್ಷದಿಂದ ಡಿಕೆಶಿ ಕಿರುಕುಳ ನೀಡುತ್ತಿದ್ದಾನೆ. ನನ್ನ ಫೋನ್ ಗೆ ಬೇರೆ-ಬೇರೆ ಮೂಲಗಳಿಂದ ಬೆದರಿಕೆ ಕರೆ ಬರುತ್ತಿವೆ. ಇವೇಲ್ಲವೂ ಕೊತ್ವಾಲ್ ರಾಮಚಂದ್ರನ ಶಿಷ್ಯನಿಂದ ಮಾತ್ರ ಸಾಧ್ಯ ಎಂದು ಚಾಟಿ ಬಿಸಿದರು.

ಸಿಎಂ ಸಿದ್ದರಾಮಯ್ಯನವರಿಗೆ ಪತ್ರ: ಸಿಡಿ ಪ್ರಕರಣ ಸಿಬಿಐಗೆ ವಹಿಸಲು ಪತ್ರದ ಮೂಲಕ ಸಿಎಂ ಸಿದ್ದರಾಮಯ್ಯವರನ್ನು ಒತ್ತಾಯಿಸುತ್ತೇನೆ. ಸದಾಶಿವ ನಗರದ ಮನೆ ಮೇಲೆ ಪೊಸ್ಟರ್ ಅಂಟಿಸಿದ ಕೇಸ್ ನ್ನು ಸಿಬಿಐ ವಹಿಸಬೇಕು ಎಂದು ಗೃಹ ಸಚಿವ, ಡಿಐಜಿಗೆ ಪತ್ರ ಬರೆಯುತ್ತೇನೆ ಎಂದು ತಿಳಿಸಿದ ಅವರು, ರಮೇಶ್ ಜಾರಕಿಹೊಳಿ ಮುಗಿಸಿದ್ದೇನೆ ಎಂದು ಹೇಳಿದ ಆಡಿಯೋ ಇದೆ. ಸಿಬಿಐ ತನಿಖೆ ಆದರೆ ಎಲ್ಲಾ ದಾಖಲೆ ಕೊಡುತ್ತೇನೆ ಎಂದು ಸ್ಪೋಟಕ ಹೇಳಿಕೆ ನೀಡಿದರು.

ಈ ವಿಷಯ ಕುರಿತು ಹೈಕೋರ್ಟ್ ಇಲ್ಲವೇ ಸುಪ್ರೀಂ ಕೋರ್ಟ್ ಮೆಟ್ಟಿಲು ಏರುತ್ತೇನೆ ಎಂದ ಅವರು, ಆಪರೇಷನ್ ಕಮಲ ಸಾಧ್ಯವೇ ಇಲ್ಲ. ಆದರೆ ಮಹಾರಾಷ್ಟ್ರ ಮಾದರಿಯಲ್ಲಿ ಸರ್ಕಾರ ಪತನ ಆಗಬಹದು. ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಇಲ್ಲವೇ ಮತ್ಯಾರಾದ್ರು ಬಂಡಾಯ ಏಳಬೇಕು. ಒಂದು ತಂಡ ರಚನೆಯಾಗಿ ಹೊರ ಬಂದ್ರೆ ಮಾತ್ರ ಸರ್ಕಾರ ಬೀಳಲಿದೆ ಎಂದು ಭವಿಷ್ಯ ನುಡಿದರು.

ನನ್ನ ಮೇಲೆ ಕೇಸ್ ದಾಖಲಾದರೆ ನಾನು ಹೋರಾಟ ಮಾಡುತ್ತೇನೆ. ನಾನು ಯಾವುದೇ ಕಾರಣಕ್ಕೂ ಹೆದರಲ್ಲ. ನಾನು ಒಬ್ಬನೇ ರಮೇಶ್ ಜಾರಕಿಹೊಳಿ ಸಾಕು, ನಾನು ಜೀವನದಲ್ಲಿ ಖರ್ಗೆಗೆ ಒಬ್ಬರಿಗೆ ಕಾಲು ಬಿದ್ದಿರಬೇಕು.

ಡಿಕೆಶಿ ಕಾರ್ ಚಾಲಕ ಪರಶಿವಮೂರ್ತಿಯನ್ನು ಯಾಕೆ ವಿಚಾರಣೆಗೆ ಒಳಪಡಿಸಿಲ್ಲ. ಬಿಜೆಪಿ ಸರ್ಕಾರ ಇದ್ದಾಗ ಯಾಕೆ ವಿಚಾರಣೆ ಮಾಡಲಿಲ್ಲ. ಅಲ್ಲೇ ಇರೋದು ಟ್ವಿಸ್ಟ್, ನನ್ನ ಮಾತಿನಿಂದ ಬಿಜೆಪಿಗೆ ಮುಜುಗರ ಆಗೋದು ಬೇಡ ಎಂದು ಪರೋಕ್ಷವಾಗಿ ಬಿಜೆಪಿ ನಾಯಕರ ವಿರುದ್ಧವೂ ಅಸಮಾಧಾನ ಹೊರ ಹಾಕಿದರು.


ಅಮಿತ್ ಶಾಗೆ ದೂರು ನೀಡುವೆ: ನ. 6–7 ರಂದು ಸಿಎಂ ಸಿದ್ದರಾಮಯ್ಯಗೆ ಭೇಟಿಯಾಗಿ ಮನವಿ ಮಾಡುತ್ತೇನೆ. ಇಲ್ಲವೇ ಪಕ್ಷದ ವೇದಿಕೆಯಲ್ಲಿ ಚರ್ಚಿಸಿ ಹೋರಾಟ ಮಾಡುವುದಾಗಿ ತಿಳಿಸಿದರು. ಮುಂದಿನ ವಾರದಲ್ಲಿ ದೆಹಲಿಗೆ ಹೋಗಿ ಡಿ.ಕೆ. ಶಿವಕುಮಾರ್ ಮತ್ತು ಶಾಸಕ ರವಿ ಗಾಣಿಗ ಹೆಸರು ಉಲ್ಲೇಖಿಸಿ ಕೇಂದ್ರ ಗೃಹ ಸಚಿವ ಅಮಿತ್ ಶಾಗೆ ದೂರು ನೀಡುವೆ ಎಂದರು.

## ಮಹಿಳಾ ಎಸ್‌ಐ ಮುಂದೆಯೇ ಡ್ರ್ಯಾಗರ್ ಹಿಡಿದು ಅಟ್ಟಹಾಸ ಮೆರೆದ ಪುಡಿ ರೌಡಿ ಅರೆಸ್ಟ್

ತುಮಕೂರು: ಮಹಿಳಾ ಎಸ್‌ಐ ಮುಂದೆಯೇ ಡ್ರ್ಯಾಗರ್ ಹಿಡಿದು ಆತಂಕ ಮೂಡಿಸಿದ್ದ ಪುಡಿ ರೌಡಿಯೊಬ್ಬನನ್ನು ತುಮಕೂರು ಪೊಲೀಸರು ಬಂಧಿಸಿದ್ದಾರೆ.

ಬಂಧಿತ ರೌಡಿಯನ್ನು ಮಧು ಅಲಿಯಾಸ್ ಮೋಜ ಎಂದು ಗುರುತಿಸಲಾಗಿದೆ. ಆರೋಪಿ ನಗರದ ಖಾಸಗಿ ಬಸ್ ನಿಲ್ದಾಣದ ಬಳಿ ಡ್ರ್ಯಾಗರ್ ಹಿಡಿದು ಸಾರ್ವಜನಿಕರಿಗೆ ಬೆದರಿಕೆ ಹಾಕಿ ಮೊಬೈಲ್ ಕಳ್ಳತನ ಮಾಡಿದ್ದಾನೆ. ಈ ಬಗ್ಗೆ ಮಾಹಿತಿ ತಿಳಿಯುತ್ತಿದ್ದಂತೆ ಆರೋಪಿ ಬಂಧನಕ್ಕೆ ಪೊಲೀಸರು ತೆರಳಿದ್ದಾರೆ.

ಈ ವೇಳೆ ಮಹಿಳಾ ಎಸ್‌ಐ ಮಂಗಳಮ್ಮ ಅವರ ಮುಂದೆಯೂ ಆರೋಪಿ ಡ್ರ್ಯಾಗರ್ ಹಿಡಿದು ಪುಂಡಾಟ ಮಾಡಿದ್ದಾನೆ.



ಸುಮಾರು ಅರ್ಧ ಗಂಟೆಗಳ ಕಾಲ ಎಸ್‌ಐ ಮುಂದೆ ಆರೋಪಿ ಡ್ರ್ಯಾಗರ್ ಹಿಡಿದು ಹುಚ್ಚಾಟ ಮಾಡಿದ್ದಾನೆ. ಬಳಿಕ ಪೊಲೀಸರು ಹರಸಾಹಸಪಟ್ಟು ಆರೋಪಿಯನ್ನು ಹಿಡಿದಿದ್ದಾರೆ. ಅಲ್ಲದೇ ಆತನ ಜೊತೆಯಿದ್ದ ಮನೋಜ್ ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ.

ಇತ್ತೀಚೆಗಷ್ಟೇ ಕೊಲೆ ಪ್ರಕರಣದಲ್ಲಿ ಅರೆಸ್ಟ್ ಆಗಿದ್ದ ಮಧು, ಜಾಮೀನಿನ ಮೇಲೆ ಹೊರಗೆ ಬಂದಿದ್ದ. ಜೈಲಿನಿಂದ ಹೊರ ಬಂದ ಕೆಲವೇ ದಿನಗಳಲ್ಲಿ ಮತ್ತೆ ಜನರಿಗೆ ತೊಂದರೆ ಕೊಡುವುದನ್ನು ಮುಂದವರಿಸಿದ್ದ. ಈಗ ಮತ್ತೆ ಆರೋಪಿಯನ್ನು ಪೊಲೀಸರು ಬಂಧಿಸಿದ್ದು, ಜೈಲಿಗೆ ಅಟ್ಟಿದ್ದಾರೆ. ಈ ಸಂಬಂಧ ಆರೋಪಿಗಳ ವಿರುದ್ಧ ತುಮಕೂರು ನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

## ಹೂವಿನ ಮಾಲೆ ಮಾಡಿದರೆ ಸಾಲದು ಅದನ್ನು ಮುಡಿದುಕೊಳ್ಳುವ ಮನಸ್ಸು ಇರಬೇಕು: ಹಿರಿಯ ಸಾಹಿತಿ ಚರಂತಿಮಠ

ಬೆಳಗಾವಿ: ಹೂವಿನ ಮಾಲೆ ಮಾಡಿದರೆ ಸಾಲದು ಅದನ್ನು ಮುಡಿದುಕೊಳ್ಳುವ ಮನಸ್ಸು ಇರಬೇಕು ಎಂದು ಹಿರಿಯ ಸಾಹಿತಿ ನೀಲಗಂಗಾ ಚರಂತಿಮಠ ಹೇಳಿದರು.



ಇಲ್ಲಿನ ಶಿವಬಸವ ನಗರದ ಲಿಂಗಾಯತ ಭವನದಲ್ಲಿ ಲಿಂಗಾಯತ ಮಹಿಳಾ ಸಮಾಜದ ವತಿಯಿಂದ ಆಯೋಜಿಸಿದ ದಿ. ಶಕುಂತಲಾ ಮೂಲಿಮನಿ ಸ್ಮರಣಾರ್ಥವಾಗಿ ಅಂಧ ಮಕ್ಕಳಿಂದ ಗಾಯನ ಸ್ಪರ್ಧೆ "ಕಲಾ-ಸನ್ಮಾನ" ಕಾರ್ಯಕ್ರಮ ಹಾಗೂ ಅರ್ಧ ಕಪ್ ಚಹಾ' ಹಾಗೂ ಅಮ್ಮ ನಾಟಕ ಉದ್ಘಾಟಿಸಿ ಅವರು ಮಾತನಾಡಿದರು.

ನಾಟಕ ಮಾಡುವ ಉದ್ದೇಶ ವೀಕ್ಷಣೆ ಮಾಡುವ ಕಲಾ ರಾಶಿಕರ ಮನವನ್ನು ತಣಿಸುವ ಮುಖ್ಯ ಹಂಬಲವಾಗಿದೆ. ಪ್ರೇಕ್ಷಕರ ಆನಂದಕ್ಕಾಗಿ ಅನೇಕ ದಿನ ತಯಾರಿ ನಡೆಸಿ ಪ್ರದರ್ಶನ ಮಾಡಿದಾಗ ಕಲಾವಿದನ ಜೀವನ ಸಾರ್ಥಕವಾಗುತ್ತದೆ. ಜೀವನದಲ್ಲಿ ಪ್ರಯತ್ನ ಪಡಬೇಕು ಹಲವಾರು ಸಂತರು ಸಾಗರದಷ್ಟು ಬದುಕಿದ್ದಾರೆ ನಾವು ಸಾಸಿವೆಅಷ್ಟು ಬದಕಬೇಕು ಎಂದು ಹೇಳಿದರು.

ಈ ವೇಳೆ ಹಿರಿಯ ಸಾಹಿತಿಗಳಾದ ನೀಲಗಂಗಾ ಚರಂತಿಮಠ ಮುಖ್ಯ ಅಥಿತಿಗಳಾಗಿ ಆಗಮಿಸಿದ್ದರು. ಸುನಂದಾ ಎಮ್ಮಿ ಬರೆದ ಹಾಗು ನಿರ್ದೇಶಿಸಿದ ಅರ್ಧ ಕಪ್ ಚಹಾ' ನಾಟಕದಲ್ಲಿ ಗೀತಾ ಗುಂಡಕಲ್ಲಿ ಅಭಿನಯಸಿದರು.

ಈ ಸಂದರ್ಭದಲ್ಲಿ ನೈನಾ ಗಿರಿಗೌಡರ್, ಕಾವೇರಿ ಕಿಲಾರಿ ಹಾಗೂ ಲಿಂಗಾಯತ ಮಹಿಳಾ ಸಮಾಜದ ಸದಸ್ಯರು ಉಪಸ್ಥಿತರಿದ್ದರು.

## ಕಬ್ಬೂರ ಪಟ್ಟಣದಲ್ಲಿ ಆದಿಶಕ್ತಿ ಅಂಬಾಭವಾನಿ ದೇವಸ್ಥಾನ ಲೋಕಾರ್ಪಣೆ ಮತ್ತು ಮೂರ್ತಿ ಪ್ರತಿಷ್ಠಾಪನೆ

ಚಿಕ್ಕೋಡಿ: ತಾಲೂಕಿನ ಕಬ್ಬೂರ ಪಟ್ಟಣದಲ್ಲಿ ಗುರುವಾರ ಶ್ರೀ ಆದಿಶಕ್ತಿ ಅಂಬಾಭವಾನಿ ದೇವಸ್ಥಾನದ ವಾಸ್ತು ಶಾಂತಿ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ಚಂಡಿಕಾ ಯಾಗ ಕಾರ್ಯಕ್ರಮ ಜರುಗಲಿದೆ ಎಂದು ಕಬ್ಬೂರ ಗೋಂಧಳಿ ಸಮಾಜದ ಅಧ್ಯಕ್ಷ ರಾಜಾರಾಮ. ಎಸ್. ಗೋಂಧಳಿ ತಿಳಿಸಿದ್ದಾರೆ.

ನ. 2 ರಂದು ಮುಂಜಾನೆ 6 ರಿಂದ 12 ಗಂಟೆಯವರೆಗೆ ನೂತನ ಮಂದಿರದ ವಾಸ್ತು ಶಾಂತಿ ಕಾರ್ಯಕ್ರಮ ಹಾಗೂ ಮಹಾಪ್ರಸಾದ ಜರುಗಲಿದ್ದು, ಮಧ್ಯಾಹ್ನ 1 ಗಂಟೆಗೆ ಶ್ರೀ ಅಂಬಾಭವಾನಿ ಮೂರ್ತಿಯನ್ನು ಭವ್ಯ ಮೆರವಣಿಗೆಯಲ್ಲಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಕಲವಾದ್ಯ ಮೇಳ ಹಾಗೂ ಸುಮಂಗಲೆಯರ ಕುಂಭೋತ್ಸವದೊಂದಿಗೆ ದೇವಸ್ಥಾನಕ್ಕೆ ಬರಮಾಡಿಕೊಳ್ಳಲಾಗುವುದು.

ನ. 3 ರ ಶುಕ್ರವಾರ ಬೆಳಗ್ಗೆ 10 ರಂದು ದೇವಸ್ಥಾನ ಲೋಕಾರ್ಪಣೆ ಹಾಗೂ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ




ಕಾರ್ಯಕ್ರಮ ಜರುಗಲಿದ್ದು, ನಿಡಸೋಸಿ ಸಿದ್ದ ಸಂಸ್ಥಾನ ಮಠದ ಶ್ರೀ. ನಿರಂಜನ ಪ್ರಣವ ಸ್ವರೂಪ ಜಗದ್ಗುರುಗಳಾದ ಪಂಚಮ ಶಿವಲಿಂಗೇಶ್ವರ ಮಹಾಸ್ವಾಮಿಗಳು ದಿವ್ಯಸಾನಿದ್ಯ ವಹಿಸಲಿದ್ದು, ಕಬ್ಬೂರು ಗೌರಿಶಂಕರ ಮಠದ ಶ್ರೀ. ಷ. ಬ್ರ. ರೇವಣಸಿದ್ಧ ಶಿವಾಚಾರ್ಯ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಲಿದ್ದಾರೆ.

ನ. 4 ರ ಬೆಳಿಗ್ಗೆ 6 ರಿಂದ 12 ರವರೆಗೆ ಚಂಡಿಕಾ ಮಹಾಯಾಗ ಹಾಗೂ ನ. 5 ರಂದು ಮೂರ್ತಿಗೆ ಮಹಾಭಿಷೇಕ ನೆರವೇರಲಿದ್ದು, ಅದೇ ದಿನ ರಾತ್ರಿ 9 ಗಂಟೆಗೆ ಸಂಗೀತ ರಸಮಂಜರಿ ಕಾರ್ಯಕ್ರಮ ಜರುಗಲಿದೆ. ಮರುದಿನ ಮೂರ್ತಿಯ ಮಹಾಭಿಷೇಕದೊಂದಿಗೆ ಕಾರ್ಯಕ್ರಮ ಸಮಾರೋಪಗೊಳ್ಳಲ್ಲಿದೆ. ಹಾಗಾಗಿ ಭಕ್ತಗಣ ಹೆಚ್ಚಿನ ಸಂಖ್ಯೆಯಲ್ಲಿ ದೈವ ಕಾರ್ಯಕ್ಕೆ ಆಗಮಿಸಿ, ಆದಿಶಕ್ತಿಯ ಕೃಪೆಗೆ ಪಾತ್ರರಾಗುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಚಿಕ್ಕೋಡಿ ಸಂಸದ ಅಣ್ಣಾಸಾಹೇಬ್ ಜೊಲ್ಲೆ, ರಾಯಬಾಗ ಶಾಸಕ ದುರ್ಯೋಧನ ಐಹೊಳೆ, ಮಾಜಿ ಸಂಸದ ರಮೇಶ್ ಕತ್ತಿ, ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ. ಎಂ. ಕವಟಗಿಮಠ, ಹಿರಾ ಶುಗರ ಸಂಕೇಶ್ವರ ನಿರ್ದೇಶಕ ಸುರೇಶ ಬೆಲ್ಲದ್, ಹಿರಾ ಶುಗರ ಸಂಕೇಶ್ವರ ನಿವೃತ್ತ ಮುಖ್ಯ ಲೆಕ್ಕಾಧಿಕಾರಿ ಜಯಸಿಂಗ್ ಸನದಿ, ಹಿರಿಯ ನ್ಯಾಯವಾದಿಗಳಾದ ತುಕಾರಾಮ. ಯ ಕಿವಡ, ಹಾಗೂ ರಾಮಚಂದ್ರ ಬಾಕಳೆ, ಕಬ್ಬೂರ ಪಿಕೆಪಿಎಸ್ ಅಧ್ಯಕ್ಷ ಮಿಲನ ಪಾಟೀಲ್, ಪ್ರಥಮ ದರ್ಜೆ ಗುತ್ತಿಗೆದಾರ ಮಹದೇವ್ ಜಿವನಿ, ರೈತ ಮಹದೇವ ಪ್ರಧಾನಿ, ಬೆಳಗಾವಿ ಆರ್ ಟಿ ಓ ರವಿ ಬಿಸ್ಸೆ, ಗೋಂಧಳಿ ಸಮಾಜದ ಮುಖಂಡರಾದ ಹನುಮಂತ ಖ ಗೋಂಧಳಿ, ಸುರೇಶ್. ಬ. ಸುಗುಟೆ, ಹಾಗೂ ಪಟ್ಟಣದ ಸಮಾಜ ಬಾಂಧವರು ಹಾಗೂ ಸಮಸ್ತ ನಾಗರಿಕರು ಉಪಸ್ಥಿತಲಿರುವರು.

## ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಕ್ಕೆ ಪ್ರವೇಶಾತಿ ಅವಧಿ ವಿಸ್ತರಣೆ

ಬೆಳಗಾವಿ: 2023–24ನೇ ಶೈಕ್ಷಣಿಕ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಾತಿ ಅವಧಿಯನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಡಿಸೆಂಬರ್ 15, 2023 ರವರೆಗೆ ವಿಸ್ತರಿಸಲಾಗಿದೆ.

2023–24ನೇ ಶೈಕ್ಷಣಿಕ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ "ವಿದ್ಯಾಸಿರಿ" ಯೋಜನೆಯನ್ನು ಎಸ್.ಎಚ್.ಪಿ ತಂತ್ರಾಂಶದ ಮೂಲಕವೇ ಅನುಷ್ಠಾನಗೊಳಿಸಲಾಗುತ್ತದೆ. ಈ ಯೋಜನೆಗೆ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದಲ್ಲಿ (ಎಸ್.ಎಚ್.ಪಿ) ಅರ್ಜಿ ಹಾಕಿ ವಿದ್ಯಾರ್ಥಿನಿಲಯಗಳಲ್ಲಿ ಸೀಟು ಲಭ್ಯವಾಗದಿರುವ ವಿದ್ಯಾರ್ಥಿಗಳು ಮಾತ್ರ ಅರ್ಹರಾಗುತ್ತಾರೆ. ವಿದ್ಯಾಸಿರಿ ಯೋಜನೆಗಾಗಿ ಪ್ರತ್ಯೇಕವಾಗಿ ಅರ್ಜಿಗಳನ್ನು ಅಹ್ವಾನಿಸುವುದಿಲ್ಲ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಧರ್ಮಸ್ಥಳ ಯೋಜನೆಯಿಂದ ಮಹಿಳೆಯರಿಗೆ ಶಕ್ತಿ ಬಂದಿದೆ: ಸಂಸದ ಮಂಗಳಾ ಅಂಗಡಿ

ಬೆಳಗಾವಿ: ಧರ್ಮಸ್ಥಳ ಯೋಜನೆಯಿಂದ ಸಮಾಜದ ಎಲ್ಲ ವರ್ಗದ ಜನರು ಅಭಿವೃದ್ಧಿ ದಿಕ್ಕಿನಲ್ಲಿ ಸಾಗುತ್ತಿದ್ದಾರೆ. ಮಹಿಳೆಯರು ಸ್ವ ಸಹಾಯ ಸಂಘಗಳಿಂದ ಕುಟುಂಬದ ಶಕ್ತಿಯಾಗಿ ಬದಲಾಗಿದ್ದಾರೆ ಎಂದು ಸಂಸದ ಮಂಗಳಾ ಸುರೇಶ್ ಅಂಗಡಿ ಹೇಳಿದರು.

ತಾಲೂಕಿನ ಮಾಸ್ತ ಮರಡಿ ವಲಯದ ಶಿಂಧೋಳ್ಳಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಆಯೋಜಿಸಲಾದ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ, ಒಕ್ಕೂಟಗಳ ಪದಗ್ರಹಣ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ದಿವ್ಯ ಸಾನಿಧ್ಯ ವಹಿಸಿದ್ದ ತಾರಿಹಾಳ ಅಡವಿ ಸಿದ್ದೇಶ್ವರ ಮಠದ ಶ್ರೀ ಅಡಿವೇಶ್ವರ ದೇವರು ಸ್ವಾಮಿಜೀ ಮಾತನಾಡಿ, ಇಂತಹ ಧಾರ್ಮಿಕ ಕಾರ್ಯಕ್ರಮದಲ್ಲಿ ನೆಮ್ಮದಿ ಅಡಗಿದೆ, ಇದೇ ನಿಜವಾದ ಸ್ವರ್ಗ. ಡಾ. ಡಿ. ವೀರೇಂದ್ರ ಹೆಗ್ಗಡೆಯವರು ತಮ್ಮ ಸಂಸ್ಥೆಯ ಮೂಲಕ ಜನರಲ್ಲಿ ಸಂಸ್ಕಾರ, ಶಿಸ್ತು, ಭಕ್ತಿ, ಭಾವನೆ ಬೆಳೆಸಿದ್ದಾರೆ ಎಂದು ಆಶೀರ್ವಚನ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ಗ್ರಾಪಂ ಅಧ್ಯಕ್ಷ ಸತೀಶ್ ಶಹಪೂರಕರ್ ವಹಿಸಿದ್ದರು. ಡಾ. ನೀಲಕಂಠ ಶಾಸ್ತ್ರಿಗಳು, ಶಿವಪುತ್ರಪ್ಪ ಪೂಜಾರಿ, ಬಸವರಾಜ್ ಸೊಪ್ಪಿಮಠ, ಬಾಬಾಗೌಡ ಪಾಟೀಲ, ಬಾಳು ಅನಾಗೊಳ್ಕರ್, ಪ್ರಮೋದ್ ಜಾಧವ, ಅನ್ನಪೂರ್ಣ ಬುರಾಣಿ, ವಿರೂಪಾಕ್ಷಿ ಇಟಗಿಯವರು ಉಪಸ್ಥಿತರಿದ್ದರು. ವಲಯ ಮೇಲ್ವಿಚಾರಕ ಪರಮೇಶ್ವರ್ ರವರು ಸ್ವಾಗತಿಸಿದರು. ಮೇಲ್ವಿಚಾರಕ ಭರತ್ ರವರು ನಿರೂಪಿಸಿದರು. ಸೇವಾ ಪ್ರತಿನಿಧಿ ಭಾರತಿ ವಂದಿಸಿದರು, ಪ್ರಗತಿ ಬಂಧು ಸ್ವ ಸಹಾಯ ಸಂಘಗಳ ಸದಸ್ಯರು, ಒಕ್ಕೂಟದ ಪದಾಧಿಕಾರಿಗಳು, ಗ್ರಾಮದ ಗಣ್ಯರು ಇತರರು ಇದ್ದರು.

## ನ.2 ರಂದು ಬೈಲಹೊಂಗಲದಲ್ಲಿ ಜಿಲ್ಲಾ ಮಟ್ಟದ ದ್ವಿತೀಯ ಕದಳಿ ಮಹಿಳಾ ಸಮಾವೇಶ

ಬೈಲಹೊಂಗಲ: ನ. 2 ರಂದು ಗುರುವಾರ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ್ ಕದಳಿ ಮಹಿಳಾ ವೇದಿಕೆಯ ಜಿಲ್ಲಾ ಘಟಕದಿಂದ ಜಿಲ್ಲಾ ಮಟ್ಟದ ದ್ವಿತೀಯ ಕದಳಿ ಮಹಿಳಾ ಸಮ್ಮೇಳನವು ಪಟ್ಟಣದ ಇಂಚಲ ಕ್ರಾಸ್ ಹತ್ತಿರದ ಶ್ರೀ ಶಿವಬಸವ ಕಲ್ಯಾಣ ಮಂಟಪದಲ್ಲಿ ಅದ್ದೂರಿಯಾಗಿ ಜರುಗಲಿದೆ.

ಬೆಳಗಾವಿ–ನಾಗನೂರಿನ ರುದ್ರಾಕ್ಷಿಮಠದ ಡಾ. ಅಲ್ಲಮಪ್ರಭು ಸ್ವಾಮೀಜಿ ಅವರು ಸಾನಿಧ್ಯ ವಹಿಸಲಿದ್ದಾರೆ. ಬೆಳವಡಿಯ ಶ್ರೀ ಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಬಸವರಾಜ ಬಾಳೇಕುಂದರಗಿ ಸಭೆಯ ಅಧ್ಯಕ್ಷತೆ ವಹಿಸಲಿದ್ದು, ಮಲಪ್ರಭೆ ಆಸ್ಪತ್ರೆಯ ಡಾ. ಬಸವರಾಜ ಮಹಾಂತಶೆಟ್ಟಿ ಬಸವೇಶ್ವರ ಪೂಜೆ ನೆರವೇರಿಸಲಿದ್ದಾರೆ.

ಅಂದು ಮುಂಜಾನೆ 8–00 ಚಿತ್ರನಟ ಶಿವರಂಜನ ಬೋಳಣ್ಣವರ ಅವರು ರಾಷ್ಟ್ರ ಧ್ವಜಾರೋಹನ ನೆರವೇರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.

ಶರಣ ಸಾಹಿತ್ಯ ಪರಿಷತ್ ತಾಲೂಕಾ ಘಟಕದ ಉಪಾಧ್ಯಕ್ಷ ಶ್ರೀಶೈಲ ಶರಣಪ್ಪನವರ ಕನ್ನಡ ಸಾಹಿತ್ಯ ಪರಿಷತ್ತಿನ್ ಧ್ವಜಾರೋಹನವನ್ನು ನೆರವೇರಿಸಲಿದ್ದು, ಬೆಳವಡಿಯ ಶ್ರೀ ಸೋಮೇಶ್ವರ ಸಕ್ಕರೆ ಕಾರ್ಖಾನೆಯ ಉಪಾಧ್ಯಕ್ಷ ಮಹಾಂತೇಶ ಮತ್ತಿಕೊಪ್ಪ, ಗಣ್ಯ ವ್ಯಾಪಾರಸ್ಥರಾದ ನಾಗನಗೌಡಾ ಪಾಟೀಲ, ಜಗದೀಶ ಮೆಟಗುಡ್ಡ, ರೋಟರಿ ಸಂಸ್ಥೆ ಅಧ್ಯಕ್ಷ ಮಹೇಶ ಬೆಲ್ಲದ, ಕದಳಿ ಮಹಿಳಾ ವೇದಿಕೆ ಜಿಲ್ಲಾಧ್ಯಕ್ಷೆ ಪೇಮಾ ಅಂಗಡಿ, ಪ್ರೌಢಶಾಲಾ ಶಿಕ್ಷಕ ಎಸ್.ಎಂ.ಪಾಟೀಲ ಉಪಸ್ಥಿತರಿರುವರು.

ಮುಂಜಾನೆ 9–00 ಘಂಟೆಗೆ ಸಮ್ಮೇಳನಾಧ್ಯಕ್ಷರ ಹಾಗೂ ಕದಳಿ ಪ್ರಶಸ್ತಿ ಪುರಸ್ಕೃತರ ಮೆರವಣಿಗೆ ನಡೆಯಲಿದೆ. ಕೆಪಿಸಿಸಿ ಕಾರ್ಯಕಾರಣಿ ಸದಸ್ಯ ರೋಹಿಣಿ ಪಾಟೀಲ, ಅಕ್ಕಮಹಾದೇವಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತ ಜಿಲ್ಲಾಧ್ಯಕ್ಷೆ ಮಂಗಳಾ ಮೆಟಗುಡ್ಡ ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ಕಜಾಪ ತಾಲೂಕಾಧ್ಯಕ್ಷ ಚಂದ್ರಶೇಖರ ಕೊಪ್ಪದ, ಜಾಗತಿಕ ಲಿಂಗಾಯತ ಮಹಾಸಭಾದ ತಾಲೂಕಾಧ್ಯಕ್ಷ ಮಹೇಶ ಕೋಟಗಿ, ಸ್ವಾವಲಂಭಿ ಪೌಂಡೇಶನ್ ಅಧ್ಯಕ್ಷ ಸಂತೋಷ ಕೊಳವಿ, ಸಮಾಜ ಸೇವಕ ಮಹಾಂತೇಶ ಅಕ್ಕಿ, ಚಿಕ್ಕೊಪ್ಪ ಬಸವಾನು ಮಂಟಪದ ಚೆನ್ನಪ್ಪ ನರಸಣ್ಣವರ, ಪಾರ್ವತಿ ಕುಲಕರ್ಣಿ ಉಪಸ್ಥಿತರಿರುವರು.

ಮುಂಜಾನೆ 10–30 ಕ್ಕೆ ಜಿಲ್ಲಾ ಕದಳಿ ಮಹಿಳಾ ಸಮಾವೇಶವನ್ನು ರಾಜ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಉದ್ಘಾಟಿಸಲಿದ್ದಾರೆ. ಮುರಗೋಡದ ಮಹಾಂತ ದುರದುಂಡೇಶ್ವರ ಮಠದ ನೀಲಕಂಠ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತ ರಾಜ್ಯಾಧ್ಯಕ್ಷ ಅಪ್ಪಾರಾವ್ ಅಕ್ಕೋಣಿ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಸಚಿವೆ ಶಶಿಕಲಾ ಜೊಲ್ಲೆ, ಶಾಸಕ ಮಹಾಂತೇಶ ಕೌಜಲಗಿ, ಪ್ರಾಧ್ಯಾಪಕಿ ಡಾ.ಗುರುದೇವಿ ಹುಲೆಪ್ಪನವರಮಠ, ರಾಷ್ಟ್ರೀಯ ಬಸವ ದಳದ ತಾಲೂಕಾಧ್ಯಕ್ಷೆ ವಿಜಯಲಕ್ಷ್ಮೀ ತೋಟಗಿ, ಕದಳಿ ಮಹಿಳಾ ವೇದಿಕೆ ರಾಜ್ಯಾಧ್ಯಕ್ಷೆ ಸುಶೀಲಾ ಸೋಮಸೇಖರ, ಗೌರಮ್ಮ ಕರ್ಕಿ ಉಪಸ್ಥಿತರಿರುವರು.

ಮಧ್ಯಾಹ್ನ 12–30 ಚಿಂತನಗೋಷ್ಠಿ ಕಾರ್ಯಕ್ರಮ ನಡೆಯಲಿದೆ. ಮುನವಳ್ಳಿಯ ಸೋಮಶೇಖರ ಮಠದ ಮುರುಘೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ. ಸಂಸದೆ ಮಂಗಳಾ ಅಂಗಡಿ ಸಭೆಯ ಅಧ್ಯಕ್ಷತೆ ವಹಿಸಲಿದ್ದು. ಸಂಘಟಣೆಯ ಗದಗ ಜಿಲ್ಲಾಧ್ಯಕ್ಷೆ ಸುಧಾ ಹುಚ್ಚನವರ ಅವರು ವಚನಗಳಲ್ಲಿ ಆರೋಗ್ಯದ ಪರಿಕಲ್ಪಣೆ ಕುರಿತಾಗಿ ಉಪನ್ಯಾಸ ನೀಡಲಿದ್ದಾರೆ. ಕದಳಿ ಮಹಿಳಾ ವೇದಿಕೆ ಜಿಲ್ಲಾ ಗೌರವಾಧ್ಯಕ್ಷೆ ರಾಜೇಶ್ವರಿ ಕವಟಗಿಮಠ, ಶರಣ ಸಂಸ್ಕೃತಿ ಉತ್ಸವ ಸಮೀತಿ ಅಧ್ಯಕ್ಷೆ ಸುವರ್ಣ ಬಿಜಗುಪ್ಪಿ, ಅನುರಾಧಾ ಕರಡಿಗುದ್ದಿ, ವಿದ್ಯಾ ನೀಲಪ್ಪನವರ ಉಪಸ್ಥಿತರಿರುವರು.

ಮಧ್ಯಾಹ್ನ 2–30 ಕ್ಕೆ ಎರಡನೇ ಚಿಂತನ ಗೋಷ್ಠಿ ನಡೆಯಲಿದ್ದು ರುದ್ರಾಕ್ಷಿಮಠದ ಪೂಜ್ಯ ಬಸವಲಿಂಗ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು, ರಾಷ್ಟ್ರ ಪ್ರಶಸ್ತಿ ವಿಜೇತೆ ಅನ್ನಪೂರ್ನ ಕನೋಜ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ವಿಜಯಪೂರದ ಕದಳಿ ಮಹಿಳಾ ವೇದಿಕೆಯ ಜಿಲ್ಲಾಧ್ಯಕ್ಷೆ ಉಷಾದೇವಿ ಹಿರೇಮಠ ಉಪನ್ಯಾಸ ನೀಡಲಿದ್ದು, ಶ್ರೀ ಸೋಮೇಶ್ವರ ಸಕ್ಕರೆ ಕಾರ್ಖಾನೆಯ ನಿರ್ದೇಶಕಿ ಅನಿತಾ ಮೆಟಗುಡ್ಡ, ಗೀತಾ ಅರಳಿಕಟ್ಟಿ, ಮಲಪ್ರಬಾ ಪಾಟೀಲ, ಕುಸುಮಾ ಗದಗ ಉಪಸ್ಥಿತರಿರುವರು.

ಪತ್ರಿ ಬಸವೇಶ್ವರ ಶರಣ ಸಂಸ್ಕೃತಿ ಉತ್ಸವದ ದ್ವಾದಶಮಾನೋತ್ಸವ ಹಾಗೂ ಫ.ಗು.ಹಳಕಟ್ಟಿ ವಚನ ಸಂಶೋಧನೆ ಶತ ವರ್ಷಾಚರಣೆ, ಮತ್ತು 100 ಮನೆಗಳಲ್ಲಿ 100 ವಚನೋತ್ಸವದ ಹಾಗೂ ಕದಳಿ ವೇದಿಕೆ ಸಮಾರೋಪ ಸಮಾರಂಭವು ಸಾಯಂಕಾಲ 5–00 ಗಂಟೆಗೆ ನಡಯಲಿದೆ.

ಬೈಲಹೊಂಗಲದ ಪ್ರಭು ನೀಲಕಂಠ ಸ್ವಾಮೀಜಿ ಸಾನಿಧ್ಯ, ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ ಸಭೆಯ ಅದ್ಯಕ್ಷತೆ ವಹಿಸಲಿದ್ದಾರೆ. ಬೆಂಗಳೂರಿನ ಜಾಗತಿಕ ಲಿಂಗಾಯತ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಡಾ.ಎಸ್.ಎಂ.ಜಾಮದಾರ, ಹಿರಿಯ ಸಾಹಿತಿ ಡಾ.ವೀರಣ್ಣ ರಾಜೂರ, ಧಾರವಾಡ ಬಸವ ಕೇಂದ್ರದ ಕಾರ್ಯದರ್ಶಿ ಬಸವಂತ ತೋಟದ, ಪುಂಡಲೀಕ ಕಡಕೋಳ, ಪತ್ರಕರ್ತ ಈಶ್ವರ ಹೋಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ವಿದ್ಯಾ ಭಜಂತ್ರಿ, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ಜನ್ಮಟ್ಟಿ, ಶರಣ ಸಾಹಿತ್ಯ ಪರಿಷತ್ತ ಜಿಲ್ಲಾಧ್ಯಕ್ಷ ಅಶೋಕ ಮಳಗಲಿ, ಕದಳಿ ಮಹಿಳಾ ವೇದಿಕೆ ತಾಲೂಕಾಧ್ಯಕ್ಷೆ ಮೀನಾಕ್ಷಿ ಕುಡಸೋಮನ್ನವರ, ರಾಜೇಶ್ವರಿ ದ್ಯಾಮನಗೌಡರ ಮುಂತಾದವರು ಪಾಲ್ಗೊಳ್ಳಿದ್ದಾರೆಂದು ಕದಳಿ ಮಹಿಳಾ ವೇದಿಕೆ ಜಿಲ್ಲಾಧ್ಯಕ್ಷೆ ಪೇಮಾ ಅಂಗಡಿ ಪ್ರಕಟಣೆಯಲ್ಲಿ ತಿಳಿದ್ದಾರೆ.

# ಗೃಹ ಸಚಿವ ಶ್ರೀ ಅಮಿತ್ ಶಾ ಅವರು ಉಜ್ಜಯಿನಿಯ ಬಾಬಾ ಮಹಾಕಾಲ್ ಮಂದಿರಕ್ಕೆ ಭೇಟಿ ನೀಡಿ ಪ್ರಾರ್ಥನೆ

ಗೃಹ ಸಚಿವ ಶ್ರೀ ಅಮಿತ್ ಶಾ ಅವರು ಉಜ್ಜಯಿನಿಯ ಬಾಬಾ ಮಹಾಕಾಲ್ ಮಂದಿರಕ್ಕೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದರು.

ಮಧ್ಯಪ್ರದೇಶದಲ್ಲಿ ಮೂರು ದಿನಗಳ ತಂಗಿದ್ದ ಅಮಿತ್ ಶಾರವರು ಎಲ್ಲಾ 10 ವಿಭಾಗಗಳ ಸಭೆ ನಡೆಸಿ ಎಲ್ಲಾ ವಿಧಾನಸಭಾ ಸ್ಥಾನಗಳ ಕಾರ್ಯಕರ್ತರೊಂದಿಗೆ ಸಂವಾದ ನಡೆಸಿ ಗೆಲುವಿನ ಮಂತ್ರವನ್ನು ನೀಡಿದರು.

ಪಕ್ಷವನ್ನು ಗೆಲುವಿನತ್ತ ಕೊಂಡೊಯ್ಯುವ ಸಾಮರ್ಥ್ಯವನ್ನು ಹೊಂದಿರುವ ಹಿರಿಯ ಭಾರತೀಯ ಜನತಾ ಪಕ್ಷದ ನಾಯಕ ಮತ್ತು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಅಕ್ಟೋಬರ್ 28 ರಿಂದ 30 ರವರೆಗೆ ಮಧ್ಯಪ್ರದೇಶದಲ್ಲಿ ಮೂರು ದಿನಗಳ ಪ್ರವಾಸದಲ್ಲಿದ್ದರು. ಈ ಸುಂಟರಗಾಳಿ ರೂಪದ ಪ್ರಯಾಣದಲ್ಲಿ ಅವರು ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರೊಂದಿಗೆ ಮ್ಯಾರಥಾನ್‌ನಂತೆ ಸಭೆಗಳನ್ನು ನಡೆಸಿದರು. ಅವರು 3 ದಿನಗಳಲ್ಲಿ ಮಧ್ಯಪ್ರದೇಶದ 10 ವಿಭಾಗಗಳಿಗೆ ಭೇಟಿ ನೀಡಿ ಎಲ್ಲಾ 230 ವಿಧಾನಸಭಾ ಕ್ಷೇತ್ರಗಳ ಕಾರ್ಯಕರ್ತರೊಂದಿಗೆ ಸಂವಾದ ನಡೆಸಿದರು.

ಭೇಟಿಯ ಮೊದಲ ದಿನ, ಶ್ರೀಯುತ ಶಾರವರು ಜಬಲ್‌ಪುರದಲ್ಲಿರುವ ಮಹಾರಾಜ ಶಂಕರ್ ಷಾ ಮತ್ತು ರಾಜಕುಮಾರ ರಘುನಾಥ್ ಷಾ ಅವರ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಿದರು. ಆ ನಂತರ ಅವರು ಛಿಂದ್ವಾರಾ ಜಿಲ್ಲೆಯ ಜುನ್ನಾರ್‌ದೇವ್ ವಿಧಾನಸಭಾ ಕ್ಷೇತ್ರದಲ್ಲಿ ಚುನಾವಣಾ ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಿದರು. ನಂತರ ಜಬಲ್‌ಪುರದಲ್ಲಿ ನಡೆದ ಸಭೆಯಲ್ಲಿ ಭಾಗವಹಿಸಿದ ಅವರು, ಭೋಪಾಲ್ ಮತ್ತು ನರ್ಮದಾಪುರಂ ಪ್ರದೇಶಗಳಲ್ಲಿ ಪಕ್ಷದ ಕಾರ್ಯಕರ್ತರೊಂದಿಗೆ ಸಭೆ ನಡೆಸಿದರು.

ಭೇಟಿಯ ಎರಡನೇ ದಿನದಂದು ಶಾ, ಭೋಪಾಲ್‌ನಲ್ಲಿರುವ ರಾಜಾ ಭೋಜನಿಗೆ ಗೌರವ ಸಲ್ಲಿಸಿದರು. ಇದಾದ ನಂತರ ಅವರು ಸಾಗರ್, ರೇವಾ ಮತ್ತು ಶಹದೋಲ್‌ನಲ್ಲಿ ಪಕ್ಷದ ಕಾರ್ಯಕರ್ತರೊಂದಿಗೆ ಸಭೆ ನಡೆಸಿದರು. ನಂತರ ಉಜ್ಜಯಿನಿಯ ಮಹಾಕಾಲನ ದೇವಸ್ಥಾನಕ್ಕೆ ಭೇಟಿ ನೀಡಿದರು.

ಯಾತ್ರೆಯ ಕೊನೆಯ ದಿನವಾದ ಅಕ್ಟೋಬರ್ 30 ರಂದು ಗ್ವಾಲಿಯರ್‌ನಲ್ಲಿ ಪಕ್ಷದ ಕಾರ್ಯಕರ್ತರನ್ನು ಭೇಟಿ ಮಾಡಿ ವಿಜಯದ ಮಂತ್ರ ನೀಡಿದರು.

ಛಿಂದ್ವಾರಾದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಶಾ, ಕಾಂಗ್ರೆಸ್ ಪಕ್ಷವನ್ನು ಗುರಿಯಾಗಿಸಿಕೊಂಡು, "ಮಧ್ಯಪ್ರದೇಶದಲ್ಲಿ ಗಾಂಧಿ ಕುಟುಂಬ, ಕಮಲ್ ನಾಥ್ ಕುಟುಂಬ ಮತ್ತು ದಿಗ್ವಿಜಯ್ ಕುಟುಂಬ ಪ್ರಾಬಲ್ಯ ಹೊಂದಿವೆ – ಈ ಮೂರು ಕುಟುಂಬಗಳು ಕಾಂಗ್ರೆಸ್ ಪಕ್ಷವನ್ನು ನಡೆಸುತ್ತಿವೆ, ಅದಕ್ಕಾಗಿಯೇ ಎಲ್ಲವೂ ಹಾಳಾಗಿದೆ. ಗಾಂಧಿ ಕುಟುಂಬ ಆದೇಶ ನೀಡುತ್ತದೆ, ಕಮಲ್ ನಾಥ್ ಸೂಚನೆಗಳನ್ನು ನೀಡುತ್ತಾರೆ, ಆದರೆ ತಪ್ಪು ಮಾಡಿದಾಗ ಅವರೆಲ್ಲರೂ ದಿಗ್ವಿಜಯ್ ಅವರನ್ನು ದೂಷಿಸುತ್ತಾರೆ.

ವಂಶಾಡಳಿತವನ್ನು ಹೇರುವ ಪಕ್ಷ ದೇಶಕ್ಕೆ ಎಂದಿಗೂ ಒಳಿತನ್ನು ಮಾಡಲಾರದು ಎಂದ ಶಾ, ಈ ಹಿಂದೆ ದಿಗ್ವಿಜಯ್ ಸಿಂಗ್ ಸರ್ಕಾರ ಮಾತ್ರ ಲೂಟಿ ಮಾಡುತ್ತಿತ್ತು, ಆದರೆ ಕಮಲ್ ನಾಥ್ ಸರ್ಕಾರದಲ್ಲಿ, ಕಮಲನಾಥ್ ಮತ್ತು ದಿಗ್ವಿಜಯ್



ಸಿಂಗ್ ಇಬ್ಬರೂ ಸೇರಿ ಲೂಟಿ ಮಾಡಿ ಸಾಕಷ್ಟು ಭ್ರಷ್ಟಾಚಾರ ಮಾಡಿದ್ದಾರೆ. ಭಾರತೀಯ ಜನತಾ ಪಕ್ಷ ಅಭಿವೃದ್ಧಿವಂಚಿತ ಮಧ್ಯಪ್ರದೇಶ ರಾಜ್ಯವನ್ನು ಅಭಿವೃದ್ಧಿ ಹೊಂದಿದ ರಾಜ್ಯವನ್ನಾಗಿ ಮಾಡುವ ಕಾರ್ಯವನ್ನು ಸರ್ಕಾರ ಮಾಡಿದೆ.

ಮುಂದುವರೆಸುತ್ತಾ ಶಾ, "ಮೋದಿಯವರು ಪ್ರಪಂಚದಾದ್ಯಂತ ಭಾರತದ ಧ್ವಜವನ್ನು ಹಾರಿಸುತ್ತಿದ್ದಾರೆ, ಆದರೆ ಕಾಂಗ್ರೆಸ್ಸಿಗೆ ಏನೂ ಕಾಣುತ್ತಿಲ್ಲ." ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, "ಭಾರತದಲ್ಲಿ ಬೇರುಗಳನ್ನು ಹೊಂದಿದವರಿಗೆ ಮಾತ್ರ ದೇಶದ ಅಭಿವೃದ್ಧಿಯನ್ನು ಅರ್ಥಮಾಡಿಕೊಳ್ಳಲು ಸಾಧ್ಯ" ಎಂದು ಹೇಳಿದರು.

ಕಾಂಗ್ರೆಸ್ ನಾಯಕ ಕಮಲ್ ನಾಥ್‌ರವರನ್ನು ತರಾಟೆಗೆ ತೆಗೆದುಕೊಂಡ ಅಮಿತ್ ಶಾ, 'ಮೋಸರ್ ಬೇರ್ ಹಗರಣ ರೂ 350 ಕೋಟಿ, ಆಗಸ್ಟಾ ವೆಸ್ಟ್‌ಲ್ಯಾಂಡ್ ಹಗರಣ ರೂ 2400 ಕೋಟಿ, ರೂ 600 ಕೋಟಿ – ಐಪಿಸಿಒ ರಸಗೊಬ್ಬರ ಹಗರಣ, ರೂ 25,000 ಕೋಟಿ – ರೈತರ ಸಾಲ ಮನ್ನಾ ಹಗರಣ, ರೂ 1178 ಕೋಟಿ – ಗೋಧಿ ಬೋನಸ್ ಹಗರಣ, ಈ ಎಲ್ಲಾ ಹಗರಣಗಳು ಕಮಲ್ ನಾಥ್‌ಗೆ ಸಂಬಂಧಿಸಿವೆ, ಈಗ ಅವರು ಮತ್ತೆ ಮುಖ್ಯಮಂತ್ರಿಯಾಗಲು ಬಯಸಿದ್ದಾರೆ.

ಮೋದಿ ಸರಕಾರದಲ್ಲಿ ಬುಡಕಟ್ಟು ಜನಾಂಗದವರ ಸಮಾಜ ಕಲ್ಯಾಣಕ್ಕೆ ಕಾಂಗ್ರೆಸ್ ನೀಡಿದ್ದ ರೂ29,000 ಕೋಟಿ ಮೊತ್ತವನ್ನು ರೂ1 ಲಕ್ಷದ 38 ಸಾವಿರ ಕೋಟಿಗೆ ಹೆಚ್ಚಿಸಲಾಗಿದೆ. ಮಧ್ಯಪ್ರದೇಶಕ್ಕೆ ಅಭಿವೃದ್ಧಿ ಅನುದಾನಗಳ ಅಡಿಯಲ್ಲಿ ಅಂದಾಜು ರೂ 7.5 ಲಕ್ಷ ಕೋಟಿ ಮತ್ತು ರೂ 12 ಲಕ್ಷ ಕೋಟಿ ಮೌಲ್ಯದ ವಿವಿಧ ಯೋಜನೆಗಳನ್ನು ನೀಡಲಾಗಿದೆ.

ಈ ಹಿಂದೆ ಆದಿವಾಸಿಗಳ ಕಲ್ಯಾಣಕ್ಕಾಗಿ ನೀರು, ಅರಣ್ಯ ಮತ್ತು ಭೂಮಿಯ ಬಗ್ಗೆ ಮಾತನಾಡಲಾಗುತ್ತಿತ್ತು, ಆದರೆ ಮೋದಿ ಸರ್ಕಾರದಲ್ಲಿ ಇದರೊಂದಿಗೆ ಅವರ ಭದ್ರತೆ, ಅವರ ಗೌರವ ಮತ್ತು ಎಲ್ಲರನ್ನೂ ಒಳಗೊಂಡ ಅಭಿವೃದ್ಧಿ ನಡೆಯುತ್ತಿದೆ.

ಉಜ್ಜಯಿನಿಯಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅಮಿತ್ ಶಾ, ರಾಮ ಮಂದಿರ ನಿರ್ಮಾಣ ವಿಷಯದ ಬಗ್ಗೆ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು ಮತ್ತು ದೇಶಕ್ಕೆ ಸ್ವಾತಂತ್ರ್ಯ ಬಂದಾಗಿನಿಂದಲೂ ಕಾಂಗ್ರೆಸ್ ಪಕ್ಷವು ರಾಮಮಂದಿರದ ವಿಷಯವನ್ನು ಹಳಿತಪ್ಪಿಸುತ್ತಿತ್ತು, ದಾರಿ ತಪ್ಪಿಸುತ್ತಿತ್ತು ಮತ್ತು ಸ್ಥಗಿತಗೊಳಿಸುತ್ತಿತ್ತು, ಆದರೆ 2019 ರಲ್ಲಿ ಸಾರ್ವತ್ರಿಕ ಚುನಾವಣೆಯಲ್ಲಿ ಮಧ್ಯಪ್ರದೇಶದ ಜನರು ಅನೇಕ ಸ್ಥಾನಗಳನ್ನು ಭಾಜಪಕ್ಕೆ ನೀಡುವ ಮೂಲಕ ಮೋದಿಯವರನ್ನು ಎರಡನೇ ಬಾರಿಗೆ ಪ್ರಧಾನಿ ಮಾಡಿದರು.

2014 ರಿಂದ 2019 ರವರೆಗೆ ಪಕ್ಷದ ಅಧ್ಯಕ್ಷರಾಗಿದ್ದ ರಾಹುಲ್ ಗಾಂಧಿ ಅವರು ಪ್ರತಿ ಚುನಾವಣೆಯಲ್ಲಿ ಬಿಜೆಪಿಯವರು ಮಂದಿರ ಕಟ್ಟುತ್ತೇವೆ ಎಂದು ಹೇಳುತ್ತಿದ್ದಾರೆ, ಆದರೆ ದಿನಾಂಕ ಹೇಳುತ್ತಿಲ್ಲ ಎನ್ನುತ್ತಿದ್ದರು, ಆದರೆ ಈಗ ರಾಹುಲ್ ಗಾಂಧಿ ಅವರು ದಿನಾಂಕವನ್ನು ತಿಳಿದುಕೊಳ್ಳಬೇಕು ಎಂದು ಅಮಿತ್ ಶಾ ಹೇಳಿದರು. ಪ್ರಧಾನಿ ನರೇಂದ್ರ ಮೋದಿಯವರು 22 ಜನವರಿ 2024 ರಂದು ಮಹಾಮಸ್ತಕಾಭಿಷೇಕಕ್ಕೆ ಹೋಗಲಿದ್ದಾರೆ ಮತ್ತು ಅದೇ ದಿನಾಂಕದಂದು, ಅಯೋಧ್ಯೆಯ ಅದೇ ಸ್ಥಳದಲ್ಲಿ, ದೊಡ್ಡ ದೇವಾಲಯದೊಳಗೆ ಭಗವಾನ್ ರಾಮನ ವಿಗ್ರಹವನ್ನು ಸ್ಥಾಪಿಸಲಾಗುವುದು ಎಂದು ಘೋಷಿಸಿದರು.

"ನಿಮ್ಮ ಮುಂದೆ ಕೇವಲ ಎರಡು ಆಯ್ಕೆಗಳಿವೆ, ಒಂದು ಈ ರಾಜ್ಯವನ್ನು ವಿಭಜಿಸಿ ಅನಾರೋಗ್ಯದ ರಾಜ್ಯವಾಗಿಸಿದ ಕಾಂಗ್ರೆಸ್ ಮತ್ತು ಇನ್ನೊಂದು ಬದಿಯಲ್ಲಿ 18 ವರ್ಷಗಳ ಆಡಳಿತದಲ್ಲಿ ಮಧ್ಯಪ್ರದೇಶವನ್ನು ಪರಿವರ್ತಿಸಿದ ಮೋದಿ ನಾಯಕತ್ವದ ಬಿಜೆಪಿ ಇದೆ" ಎಂದು ನೆರೆದಿದ್ದ ಜನಸ್ತೋಮದ ಮುಂದೆ ಶ್ರೀಯುತ ಶಾ ಹೇಳಿದರು,

ಬಿಜೆಪಿ ಆಡಳಿತದಲ್ಲಿ ಮಹಾಕಾಲ್ ಲೋಕವನ್ನು ರಚಿಸಲಾಗಿದೆ ಎಂದ ಶಾ, ಪ್ರಪಂಚದಾದ್ಯಂತದ ಜನರು ಮಹಾಕಾಲ್ ಲೋಕಕ್ಕೆ ಭೇಟಿ ನೀಡುತ್ತಿದ್ದಾರೆ ಮತ್ತು ಕಮಲ್ ನಾಥ್ ಹೊರತುಪಡಿಸಿ ಎಲ್ಲರೂ ಅದನ್ನು ಹೊಗಳಿದ್ದಾರೆ ಎಂದರು.

ಕಾಂಗ್ರೆಸ್ ಪಕ್ಷವನ್ನು ಗುರಿಯಾಗಿಟ್ಟುಕೊಂಡು, ಬಿಜೆಪಿ ಸರ್ಕಾರಗಳು ಎಷ್ಟೇ ಅಭಿವೃದ್ಧಿ ಮಾಡಿದರೂ ಅದನ್ನು ವಿರೋಧಿಸುವ ಅಭ್ಯಾಸವನ್ನು ಕಾಂಗ್ರೆಸ್ ಹೊಂದಿದೆ, ತ್ರಿವಳಿ ತಲಾಖ್ ಅನ್ನು ತೆಗೆದುಹಾಕುವಾಗಲೂ ಅದನ್ನು ತೆಗೆದುಹಾಕಬೇಡಿ, ನಾವು ತೆಗೆದುಹಾಕುತ್ತೇವೆ ಎಂದು ಕಾಂಗ್ರೆಸ್ ಹೇಳಿತ್ತು. ಆರ್ಟಿಕಲ್ 370, ಅವುಗಳನ್ನು ತೆಗೆದುಹಾಕಬೇಡಿ ಎಂದು ಅವರು ಹೇಳುತ್ತಿದ್ದರು, ನಾವು ಸರ್ಜಿಕಲ್ ಸ್ಟ್ರೈಕ್ ಮತ್ತು ವೈಮಾನಿಕ ದಾಳಿಯ ಮೂಲಕ ಪಾಕಿಸ್ತಾನಕ್ಕೆ ಬುದ್ಧಿ ಕಲಿಸಿದಾಗ, ಅದಕ್ಕೂ ಅವರು ಆಕ್ಷೇಪ ವ್ಯಕ್ತಪಡಿಸಿದ್ದರು.

ಪ್ರತಿ ವರ್ಷ ಒಂದು ದೀಪಾವಳಿ ಇದ್ದರೂ, ಈ ಬಾರಿ ಮಧ್ಯಪ್ರದೇಶದ ಜನರು ಮೂರು ದೀಪಾವಳಿಗಳನ್ನು ಆಚರಿಸಬೇಕು ಎಂದು ಶಾ ಹೇಳಿದರು, ಒಂದು ದೀಪಾವಳಿಯ ದಿನದಂದು, ಎರಡನೆಯದು ಮಧ್ಯಪ್ರದೇಶದಲ್ಲಿ ಬಿಜೆಪಿ ಸರ್ಕಾರ ರಚಿಸುವ ದಿನ, ಮತ್ತು ಮೂರನೆಯದಾಗಿ, ಗೌರವಾನ್ವಿತ ಪ್ರಧಾನಿ ಶ್ರೀ ನರೇಂದ್ರ ಮೋದಿಯವರು ಅಯೋಧ್ಯೆಯ ಭವ್ಯವಾದ ಶ್ರೀರಾಮ ಮಂದಿರದಲ್ಲಿ ರಾಮಲಲ್ಲಾನನ್ನು ಸ್ಥಾಪಿಸುವಾಗ ಎಂದರು.

ಬಿಜೆಪಿಗೆ ಮತ ನೀಡುವಂತೆ ಮನವಿ ಮಾಡಿದ ಶಾ, ಯಾರೋ ಒಬ್ಬರು ಶಾಸಕ, ಮಂತ್ರಿ ಮತ್ತು ಮುಖ್ಯಮಂತ್ರಿಯಾಗಲು ಮತ ಹಾಕಬೇಡಿ, ನಿಮ್ಮ ಮತ ಮಧ್ಯಪ್ರದೇಶ ಮತ್ತು ಭಾರತದ ಭವಿಷ್ಯವನ್ನು ನಿರ್ಧರಿಸಲಿದೆ ಎಂದರು. ದೇಶವನ್ನು ಸುರಕ್ಷಿತ, ಸಮೃದ್ಧ ಮತ್ತು ವಿಶ್ವದಲ್ಲೇ ನಂಬರ್ ಒನ್ ಮಾಡುವ ಮೋದಿಯವರನ್ನು ಬೆಂಬಲಿಸುವ ಸರ್ಕಾರವನ್ನು ರಚಿಸಬೇಕು ಎಂದು ಮನವಿ ಮಾಡಿದರು.




BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089

# ಕರ್ನಾಟಕ ರಾಜ್ಯೋತ್ಸವದ ಸುವರ್ಣ ಸಂಭ್ರಮ

ಬೆಳಗಾವಿ: ಬೆಳಗಾವಿ ಜಿಲ್ಲಾಡಳಿತ ವತಿಯಿಂದ ನವ್ಹೆಂಬರ್ 01, 2023 ರಂದು ಕರ್ನಾಟಕ ರಾಜ್ಯೋತ್ಸವದ ಸುವರ್ಣ ಸಂಭ್ರಮ ಆಚರಿಸಲಾಗುತ್ತಿದೆ.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ರಾಷ್ಟ್ರಧ್ವಜಾರೋಹನವನ್ನು ನೆರವೇರಿಸಿ ತಾಯಿ ಭುವನೇಶ್ವರಿ ದೇವಿಯ ಪೂಜೆ ಸಲ್ಲಿಸಿ ಕರ್ನಾಟಕ ರಾಜ್ಯೋತ್ಸವದ ಸಂದೇಶವನ್ನು ನೀಡಲಿದ್ದಾರೆ.

ಜಿಲ್ಲಾಧಿಕಾರಿಗಳು ಹಾಗೂ ರಾಜ್ಯೋತ್ಸವ ದಿನಾಚರಣೆ ಸಮಿತಿ ಅಧ್ಯಕ್ಷರಾದ ನಿತೇಶ್ ಪಾಟೀಲ ಹಾಗೂ ಮತ್ತಿತರರು ಉಪಸ್ಥಿತರಿರಲಿದ್ದಾರೆ.

ನಗರದ ಕುಮಾರ ಗಂಧರ್ವ ಕಲಾಮಂದಿರದಲ್ಲಿ ನವ್ಹೆಂಬರ್ 2, 2023 ರಂದು ಸಂಜೆ 5.30 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಸದರಿ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಲಕ್ಷ್ಮಿ ಆರ್. ಹೆಬ್ಬಾಳಕರ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಶಾಸಕರಾದ ಆಸೀಫ್ ಸೇಠ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

ಕರ್ನಾಟಕ ವಿಧಾನಸಭೆ ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಮ. ಪಟ್ಟಣ, ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–2 ನವದೆಹಲಿ ಪ್ರಕಾಶ ಬಾ. ಹುಕ್ಕೇರಿ ಹಾಗೂ ಮತ್ತೀತರ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ರತ್ನಶ್ರೀ ಪುತಳೇಕರ ಅವರಿಗೆ ಡಾಕ್ಟರೇಟ್ ಪದವಿ



ಬೆಳಗಾವಿ: ರಾಮತೀರ್ಥ ನಗರದ ರತ್ನಶ್ರೀ ಪುತಳೇಕರ ಅವರಿಗೆ ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಅವರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಶಾಸ್ತ್ರೀಯ ಕನ್ನಡ ಭಾಷಾ ಅಧ್ಯಯನ ಸಂಸ್ಥೆಗೆ ಸಲ್ಲಿಸಿದ 'ಅಭಿಧಾನ ವಸ್ತುಕೋಶ ಹಾಗೂ ಅಮರಕೋಶದ ತೌಲನಿಕ ಅಧ್ಯಯನ' ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿಯನ್ನು ನೀಡಿದೆ. ಅವರಿಗೆ ಶಾಸ್ತ್ರೀಯ ಕನ್ನಡ ಭಾಷಾ ಅಧ್ಯಯನ ಸಂಸ್ಥೆಯ ಮುಖ್ಯಸ್ಥರಾದ ಪ್ರೊ. ಎಸ್. ಎಂ. ಗಂಗಾಧರಯ್ಯ ಅವರು ಮಾರ್ಗದರ್ಶಕರಾಗಿದ್ದರು.

# ಏಕಲವ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿರುವ ರಾಜ್ಯದ ಕ್ರೀಡಾಪಟುಗಳಿಗೆ 2022 ನೇ ಸಾಲಿನ ಏಕಲವ್ಯ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಜಿ ಸಲ್ಲಿಸಲು ಇರಬೇಕಾದ ಅರ್ಹತೆಗಳು:**

ಕಳೆದ 5 ವರ್ಷಗಳ ಕ್ರೀಡಾ ಸಾಧನೆಯನ್ನು ಪರಿಗಣಿಸಲಾಗುವುದು, ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿದ ಕ್ರೀಡಾಪಟುಗಳು ಪ್ರಶಸ್ತಿಗೆ ಅರ್ಹರಾಗಿರುತ್ತಾರೆ, ರಾಷ್ಟ್ರ ಮಟ್ಟದ ಕ್ರೀಡೆಗಳಲ್ಲಿ ಕರ್ನಾಟಕವನ್ನು 5 ವರ್ಷ ಪ್ರತಿನಿಧಿಸಿದ ಭಾರತದ ನಿವಾಸಿಯಾದ ಕ್ರೀಡಾಪಟುಗಳು ಅರ್ಜಿ ಸಲ್ಲಿಸಬಹುದು. ಅಂತರರಾಷ್ಟ್ರ ಕ್ರೀಡಾಕೂಟಗಳಲ್ಲಿ ಭಾರತವನ್ನು ಪ್ರತಿನಿಧಿಸಿದ ಕರ್ನಾಟಕದ ಕ್ರೀಡಾಪಟುಗಳು ಪ್ರಶಸ್ತಿಗೆ ಅರ್ಹರಾಗಿರುತ್ತಾರೆ. ಇಂತಹ ಸಂದರ್ಭದಲ್ಲಿ ಕನಿಷ್ಠ ಒಂದು ವರ್ಷ ರಾಷ್ಟ್ರ ಮಟ್ಟದ ಕ್ರೀಡಾಕೂಟದಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿರಲೇಬೇಕು.

ಅರ್ಹ ಕ್ರೀಡಾಪಟುಗಳು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಉಪ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಬೆಳಗಾವಿ ಇಲ್ಲಿ ಸಲ್ಲಿಸಬಹುದು. ಅರ್ಜಿಗಳನ್ನು ಸಲ್ಲಿಸಲು ನವ್ಹೆಂಬರ್ 22, 2023 ಕೊನೆಯ ದಿನವಾಗಿರುತ್ತದೆ. ನಂತರ ಬಂದ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿಯ ಉಪ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯ ದೂರವಾಣಿ ಸಂಖ್ಯೆ 0831–2950306 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ನ.8 ರಂದು ಶಿಕ್ಷಣ ಅದಾಲತ್

ಬೆಳಗಾವಿ: ಶಾಲಾ ಶಿಕ್ಷಣ ಇಲಾಖೆ ಅಪರ ಆಯುಕ್ತರು, ಧಾರವಾಡರವರ ನೇತೃತ್ವದಲ್ಲಿ ನ. 8 2023 ರಂದು ಬೆಳಗಾವಿಯಲ್ಲಿ ಬೆಳಗಾವಿ ಉಪನಿರ್ದೇಶಕರ ವ್ಯಾಪ್ತಿಯ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಮುಂಜಾನೆ 10 ಗಂಟೆಗೆ ಬೆಳಗಾವಿ ಉಪನಿರ್ದೇಶಕರ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಬಾದಿತ ಶಿಕ್ಷಕರು ಮತ್ತು ಸಾರ್ವಜನಿಕರು ಹಾಜರಿದ್ದು ಇಲಾಖೆಗೆ ಸಂಬಂಧಿಸಿದ ತಮ್ಮ ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಕಂಡುಕೊಳ್ಳಬಹುದಾಗಿದೆಯೆಂದು ಎಂದು ಬೆಳಗಾವಿ ಶಾಲಾ ಶಿಕ್ಷಣ ಇಲಾಖೆ (ದ) ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪುನರ್ವಸತಿ ಕಾರ್ಯಕರ್ತರ ಹುದ್ದೆ: ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ತಾಲೂಕಿನ ಮಹಾನಗರ ಪಾಲಿಕೆಯಲ್ಲಿ ವ್ಯಾಪ್ತಿಯಲ್ಲಿ ಖಾಲಿ ಇರುವ 4 ನಗರ ಪುನರ್ವಸತಿ ಕಾರ್ಯಕರ್ತರ (ಯು.ಆರ್.ಡಬ್ಲ್ಯೂ.) ಹುದ್ದೆಗಳನ್ನು ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಮಾಸಿಕ 9 ಸಾವಿರ ರೂ ಗಳ ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಅಭ್ಯರ್ಥಿಗಳು ನ.30 2023 ಸಂಜೆ 5 ಗಂಟೆಯೊಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ತಾಲೂಕು ಪಂಚಾಯತ ಕಾರ್ಯಾಲಯ, ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

**ಷರತ್ತುಗಳು:**

ಅರ್ಜಿದಾರರು ವಿಕಲಚೇತನರಿದ್ದು, ಕನಿಷ್ಟ 40%ಅಥವಾ 40% ಕ್ಕಿಂತ ಹೆಚ್ಚಿನಅಂಗವಿಕಲತೆ ಪ್ರಮಾಣ ಹೊಂದಿರತಕ್ಕದ್ದು. (ಯು.ಡಿ.ಐ.ಡಿ. ಗುರುತಿನಕಾರ್ಡ ಲಗತ್ತಿಸುವುದು), ಅರ್ಜಿದಾರರುಮಹಾನಗರ ಪಾಲಿಕೆ

ಬೆಳಗಾವಿಯವ್ಯಾಪ್ತಿಗೊಳಪಟ್ಟಿರಬೇಕು, ಅರ್ಜಿದಾರರು ಎಸ್.ಎಸ್.ಎಲ್.ಸಿ. ಉತ್ತೀರ್ಣ ಅನುತ್ತೀರ್ಣರಾಗಿದ್ದು, ಕಂಪ್ಯೂಟರಜ್ಞಾನ ಹೊಂದಿರತಕ್ಕದ್ದು, ಅರ್ಜಿದಾರರು ಅರ್ಜಿ ಸಲ್ಲಿಕೆ ಕೊನೆಯ ನ.30 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು, ವಿಕಲಚೇತನ ಮಹಿಳಾ, ಪ.ಜಾತಿ ಮತ್ತು ಪ. ಪಂಗಡದಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿ ತಾಲೂಕಿನ ಎಂ.ಆರ್.ಡಬ್ಲ್ಯೂ (ಮೋ:8123672033) ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ರಾಜ್ಯೋತ್ಸವ–2023ರ ಸಂಭ್ರಮ

# ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ 25 ಮಹನೀಯರಿಗೆ ಜಿಲ್ಲಾಡಳಿತದಿಂದ ಸನ್ಮಾನ: ಜಿಲ್ಲಾಧಿಕಾರಿ

ಬೆಳಗಾವಿ: ಕನ್ನಡಪರ ಹೋರಾಟಗಾರರು, ಮಾಧ್ಯಮ ಪ್ರತಿನಿಧಿಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಜಿಲ್ಲೆಯ ಒಟ್ಟು 25 ಮಹನೀಯರನ್ನು ನವೆಂಬರ್ 1 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿರುವ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲಾಡಳಿತದ ವತಿಯಿಂದ ಸನ್ಮಾನಿಸಿ, ಗೌರವಿಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

ಪ್ರತಿವರ್ಷದಂತೆ ಕರ್ನಾಟಕ ರಾಜ್ಯೋತ್ಸವ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಕೆಲಸ ಮಾಡಿದವರನ್ನು ಗೌರವಿಸಲಾಗುತ್ತದೆ.

ಅದೇ ಪ್ರಕಾರ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹ ಅಧಿಕಾರಿ ಹರ್ಷಲ್ ಭೋಯರ್ ಅವರ ಅಧ್ಯಕ್ಷತೆಯ ಆಯ್ಕೆ ಸಮಿತಿಯು ಈ ಬಾರಿಯ ಸನ್ಮಾನಿತರನ್ನು ಆಯ್ಕೆ ಮಾಡಿರುತ್ತದೆ.

**ಕನ್ನಡಪರ ಹೋರಾಟಗಾರರು:**

ಕನ್ನಡಪರ ಹೋರಾಟಗಾರರಾದ ಬೆಳಗಾವಿಯ ಪಂಚಾಕ್ಷರಿ ಶ್ರೀಶೈಲ್ ಹಿರೇಮಠ, ರಾಜು ಕುಬೇರ ಭಾವಿ, ಭಾವಕಣ್ಣ ಭಂಗ್ಯಾಗೋಳ(ನಾಯಕ), ಸುರೇಶ ಲಗಮುಪ್ಪ ಗವನ್ನವರ, ಬಾಳು ಈರಪ್ಪ ಜಡಗಿ, ಮಲ್ಲೇಶ ಚೌಗಲೆ ಹಾಗೂ ಬೈಲಹೊಂಗಲದ ಮಹಾಂತೇಶ



ತುರಮುರಿ ಇವರನ್ನು ಸನ್ಮಾನಿಸಲಾಗುವುದು.

**ಮಾಧ್ಯಮ ಪ್ರತಿನಿಧಿಗಳು:**

ಅದರಂತೆ ಮಾಧ್ಯಮ ಕ್ಷೇತ್ರದ ವಿವಿಧ 7 ವಿಭಾಗಗಳಿಂದ 9 ಜನ ಪತ್ರಕರ್ತರನ್ನು ಜಿಲ್ಲಾಡಳಿತದ ವತಿಯಿಂದ ಸನ್ಮಾನಕ್ಕಾಗಿ ಆಯ್ಕೆ ಮಾಡಲಾಗಿರುತ್ತದೆ.

ಮುದ್ರಣ ವಿಭಾಗದಿಂದ ಇಂಡಿಯನ್ ಎಕ್ಸ್ ಪ್ರೆಸ್ ದಿನಪತ್ರಿಕೆಯ ಹಿರಿಯ ಸಂಪಾದಕ ನೌಶಾದ್ ಬಿಜಾಪುರ, ಸಂಯುಕ್ತ ಕರ್ನಾಟಕ ಪತ್ರಿಕೆ ವರದಿಗಾರ್ತಿ ಕೀರ್ತನಕುಮಾರಿ ಕಾಸರಗೋಡ, ಎಲೆಕ್ಟ್ರಾನಿಕ್ ಮಾಧ್ಯಮ ವಿಭಾಗದಿಂದ ನ್ಯೂಸ್–18 ವರದಿಗಾರ ಚಂದ್ರಕಾಂತ ಸುಗಂಧಿ ಹಾಗೂ ಟಿ.ವ್ಹಿ–5 ವರದಿಗಾರ ಶ್ರೀಧರ ಕೋಟಾರಗಸ್ತಿ.

ಅದೇ ರೀತಿಯಲ್ಲಿ ಜಿಲ್ಲಾ–ಪ್ರಾದೇಶಿಕ ದಿನಪತ್ರಿಕೆ ಸಂಪಾದಕರ ವಿಭಾಗದಲ್ಲಿ ನಾಡೋಜ ದಿನ ಪತ್ರಿಕೆಯ ಸಂಪಾದಕ ಸಲೀಂ ಧಾರವಾಡಕರ, ಪತ್ರಿಕಾ ಛಾಯಾಗ್ರಾಹಕರ ವಿಭಾಗದಲ್ಲಿ ಪಿ.ಕೆ ಬಡಿಗೇರ, ಟಿ.ವ್ಹಿ ಕ್ಯಾಮೆರಾಮನ್ ವಿಭಾಗದಲ್ಲಿ ಪಬ್ಲಿಕ್ ಟಿವಿ ಕ್ಯಾಮೆರಾಮನ್ ಸುನೀಲ ಗಾವಡೆ, ತಾಲೂಕು ವರದಿಗಾರ ವಿಭಾಗದಲ್ಲಿ ರಾಯಭಾಗ ತಾಲೂಕು ವರದಿಗಾರ ಯಲ್ಲಪ್ಪ ತಳವಾರ ಹಾಗೂ ಪತ್ರಿಕಾ ವಿತರಕರ ವಿಭಾಗದಲ್ಲಿ ಖಾನಾಪುರದ ಶಿವಾನಂದ ಅನಂತರಾವ್ ವಾಗೂಡೆಕರ್ ಅವರನ್ನು ಸನ್ಮಾನಿಸಲಾಗುವುದು.

**ವಿವಿಧ ಕ್ಷೇತ್ರಗಳ ಮಹನೀಯರು:**

ಸಂಗೀತ ಕ್ಷೇತ್ರದಲ್ಲಿ ಬೆಳಗಾವಿಯ ನಾದ ಸುಧಾ ಸುಗಮ ಸಂಗೀತ ಶಾಲೆಯ ಸಂಸ್ಥಾಪಕರು ಹಾಗೂ ಶಿಕ್ಷಕರಾದ ಎಂ.ಎನ್. ಸತ್ಯನಾರಾಯಣ, ಕೈವಲ ಭಜನಾ ಕ್ಷೇತ್ರದಲ್ಲಿ ಅಥಣಿ ತಾಲ್ಲೂಕು ದರೂರಿನ ಮಾರುತಿ ಸಿದ್ದಪ್ಪ ಸಿನಪ್ಪಗೊಳ, ಮಿಮಿಕ್ರಿ/ಸಮಾಜ ಸೇವೆಯಲ್ಲಿ ತೊಡಗಿರುವ ಬೆಳಗಾವಿ ಟಿಳಕವಾಡಿಯ ಸಂತೋಷ್ ಆರ್. ದಾಮೇಕರ, ಕ್ರೀಡಾ ವಿಭಾಗದಲ್ಲಿ ಖಾನಾಪುರ ತಾಲ್ಲೂಕಿನ ತೋಲಗಿ ಗ್ರಾಮದ ಸುನೀತಾ ದುಂಡಪ್ಪನವರ, ವೈದ್ಯಕೀಯ ವಿಭಾಗದಲ್ಲಿ ಹುಕ್ಕೇರಿ ತಾಲ್ಲೂಕಿನ ದಾದಬಾನಹಟ್ಟಿಯ ಡಾ. ಸುಕಲಾದೇವಿ ವಿರೂಪಾಕ್ಷಪ್ಪ ದುಗಾಣಿ, ಸಮಾಜ ಸೇವೆ ಕ್ಷೇತ್ರದಲ್ಲಿ ಅಥಣಿ ತಾಲ್ಲೂಕು ಕೋಳಿಗುಡ್ಡದ ಸುಶೀಲಾ ಪಾಟೀಲ, ಬೆಳಗಾವಿ ತಾಲ್ಲೂಕು ಹುದಲಿಯ ಯಲ್ಲಪ್ಪ ಹುದಲಿ, ರಾಯಬಾಗ ತಾಲ್ಲೂಕು ಕುಡಚಿಯ ಕಿರಣ ಬೇಡಿ ಹಾಗೂ ಮೂಡಲಗಿ ತಾಲ್ಲೂಕಿನ ಹಳ್ಳೂರ ಗ್ರಾಮದ ಮುರಿಗೆಪ್ಪ ಬಸಪ್ಪ ಮಾಲಗಾರ ಇವರನ್ನು ರಾಜ್ಯೋತ್ಸವದಲ್ಲಿ ಸನ್ಮಾನಿಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಂದೆಯ 10 ಸಾವಿರ ಸಾಲಕ್ಕೆ ಪುತ್ರಿ ಮೇಲೆ ನಿರಂತರ ಅತ್ಯಾಚಾರ; ಅಪರಾಧಿಗೆ 20 ವರ್ಷ ಜೈಲೂಟ ವಿಧಿಸಿದ ನ್ಯಾಯಾಲಯ

ಬೆಂಗಳೂರು: ತಂದೆ ಪಡೆದಿದ್ದ 10 ಸಾವಿರ ರೂ. ಬಡ್ಡಿ ಹಣಕ್ಕೆ ಮಗಳನ್ನು ಮನೆ ಕೆಲಸಕ್ಕೆ ಇಟ್ಟುಕೊಂಡು, ಆಕೆಯ ಮೇಲೆ ಅತ್ಯಾಚಾರ ಎಸಗಿದ್ದ ಅಪರಾಧಿಗೆ 20 ವರ್ಷ ಜೈಲುಶಿಕ್ಷೆ ವಿಧಿಸಿ ಎಟಿಎಸ್‌ಸಿ 3ನೇ ನ್ಯಾಯಾಲಯ ತೀಪು ನೀಡಿದೆ.



ದೇವರಜೀವನಹಳ್ಳಿ ನಿವಾಸಿ ವಾಸಿಂ ಖಾನ್ ಅಲಿಯಾಸ್ ಹಸನ್ (32) ಅಪರಾಧಿಗೆ 20 ವರ್ಷ ಜೈಲು ಮತ್ತು 20 ಸಾವಿರ ರೂ. ದಂಡ ವಿಧಿಸಲಾಗಿದೆ. ದೌರ್ಜನ್ಯವನ್ನು ಯಾರಿಗೂ ಹೇಳದಂತೆ ಬೆದರಿಕೆಯೊಡ್ಡಿ ಸಂತ್ರಸ್ತೆ ಮೇಲೆ ಹಲ್ಲೆ ನಡೆಸಿದ್ದ ಅಪರಾಧಿ ಸಹೋದರಿ ತಬರಿನ್ ತಾಜ್ ಅಲಿಯಾಸ್ ತಬ್ಬುಗೆ 1 ವರ್ಷ ಜೈಲುಶಿಕ್ಷೆ ವಿಧಿಸಿ ನ್ಯಾಯಾಧೀಶರಾದ ಇಷ್ರತ್ ಜಹಾನ್ ಅರ ಶಿಕ್ಷೆ ಪ್ರಕಟಿಸಿದ್ದಾರೆ. ಅಲ್ಲದೆ ಸಂತ್ರಸ್ತೆಗೆ 4 ಲಕ್ಷ ರೂ. ಪರಿಹಾರ ನೀಡುವಂತೆ ಸರ್ಕಾರಕ್ಕೆ ಸೂಚಿಸಿದ್ದಾರೆ.

ಹಿಂದು ಪರಿಶಿಷ್ಟ ಜಾತಿಗೆ ಸೇರಿದ ಸಂತ್ರಸ್ತೆ ತಂದೆ, 2019ರಲ್ಲಿ 10 ಸಾವಿರ ರೂ. ಬಡ್ಡಿಗೆಂದು ವಾಸಿಂ ಖಾನ್ ಬಳಿ ಪಡೆದಿದ್ದರು. ಅಸಲು, ಬಡ್ಡಿ ಹಣ ಕೊಡಲು ಸಾಧ್ಯವಾಗಿರಲಿಲ್ಲ. ಸಾಲದ ಹಣ ವಾಪಸ್ ಕೊಡುವಂತೆ ಒತ್ತಾಯ ಮಾಡಿದಾಗ ಪತ್ನಿ ಮತ್ತು ಮಗಳನ್ನು ಬಿಟ್ಟು ತಂದೆ ದೂರವಾಗಿದ್ದ. ಇದನ್ನೇ ಮುಂದಿಟ್ಟುಕೊಂಡ ಅಪರಾಧಿ, ಸಂತ್ರಸ್ತೆಯ ತಾಯಿಗೆ ನಿಮ್ಮ ಮಗಳನ್ನು ಮನೆ ಕೆಲಸಕ್ಕೆ ಕಳುಹಿಸಿ, ಇಲ್ಲವಾದರೆ ಬಡ್ಡಿಸಮೇತ ಹಣ ಹಿಂತಿರುಗಿಸುವಂತೆ ಒತ್ತಾಯಿಸಿದ್ದ. ದಿಕ್ಕು ತೋಚದ ತಾಯಿ, 13 ವರ್ಷದ ಮಗಳನ್ನು ವಾಸಿಂ ಮನೆಗೆ ಕೆಲಸಕ್ಕೆ ಕಳುಹಿಸಿದ್ದರು.

ಒಂದು ವರ್ಷದಿಂದ ಬಾಲಕಿಯನ್ನು ಕೆಲಸಕ್ಕೆ ಇಟ್ಟುಕೊಂಡಿದ್ದ ವಾಸಿಂ, ಮನೆಯಲ್ಲಿ ಯಾರು ಇಲ್ಲದೆ ಇದ್ದಾಗ ಆಕೆಯ ಮೇಲೆ ಅತ್ಯಾಚಾರ ಎಸಗುತ್ತಿದ್ದ. ಜತೆಗೆ ಯಾರಿಗೂ ಹೇಳದಂತೆ ಪ್ರಾಣ ಬೆದರಿಕೆ ಒಡ್ಡಿದ್ದ. ತಬರಿನ್ ತಾಜ್‌ಗೆ ವಿಷಯ ಗೊತ್ತಾದ ಮೇಲೂ ಬಾಲಕಿ ಮೇಲೆ ಹಲ್ಲೆ ನಡೆಸಿ ತನ್ನ ಸಹೋದರನಿಗೆ ಸಾಥ್ ಕೊಟ್ಟಿದ್ದಳು ಎನ್ನಲಾಗಿದೆ.

# ದಲಿತ ಕಾಂಗ್ರೆಸ್ ಮುಖಂಡನ ಕೊಡಲಿಯಿಂದ ಕೊಚ್ಚಿ ಬರ್ಬರ ಕೊಲೆ



ರಾಯಚೂರು: ಕಾಂಗ್ರೆಸ್ ಮುಖಂಡನ ಕೊಡಲಿಯಿಂದ ಕೊಚ್ಚಿ ಬರ್ಬರ ಕೊಲೆ ಮಾಡಿರುವ ಘಟನೆ ಮಾನ್ವಿ ತಾಲೂಕು ಮದ್ಲಾಪುರ ಗ್ರಾಮದಲ್ಲಿ ನಡೆದಿದೆ.

ಪ್ರಸಾದ್ ಮದ್ಲಾಪುರ ಕೊಲೆಯಾದ ದುರ್ದೈವಿ. ಪ್ರಸಾದ್ ಮದ್ಲಾಪುರ ಅವರು ದಲಿತ ಮುಖಂಡರಾಗಿದ್ದರು. ಜೊತೆಗೆ ಸಚಿವರಾದ ಬೋಸರಾಜು ಅವರ ಕಟ್ಟಾ ಬೆಂಬಲಿಗರಾಗಿದ್ದರು. ಬೆಳಗಿನ ಜಾವ 5:30 ರ ಸುಮಾರಿಗೆ ಮದ್ಲಾಪುರ ಗ್ರಾಮದಲ್ಲಿ ಕೊಲೆ ನಡೆದಿದೆ.

ಪ್ರಸಾದ್ ಮದ್ಲಾಪುರ ಇಂದು ಬೆಳಗ್ಗೆ ಬೈಕ್ನಲ್ಲಿ ಹೋಗ್ತಿದ್ದಾಗ ಇಬ್ಬರು ದುಷ್ಕರ್ಮಿಗಳು ಅಡ್ಡ ಬಂದಿದ್ದಾರೆ. ಬೈಕ್ ನಿಲ್ಲಿಸುತ್ತಿದ್ದಂತೆಯೇ, ಕೊಡಲಿಯಿಂದ ಕೊಚ್ಚಿ ಕೊಲೆ ಮಾಡಿ ಅಲ್ಲಿಂದ ಪರಾರಿಯಾಗಿದ್ದಾರೆ. ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿದ್ಯುತ್ ಹರಿವು: ಸಾರ್ವಜನಿಕರಿಗೆ ಎಚ್ಚರಿಕೆ

ಬೆಳಗಾವಿ: ಜಿಲ್ಲೆಯ ಗೋಕಾಕ ತಾಲ್ಲೂಕಿನ ಹಾಲಿ ಚಾಲ್ತಿಯಲ್ಲಿರುವ 110ಕೆವಿ ನಾಗನೂರ–ಮೂಡಲಗಿ ವಿದ್ಯುತ್ ಪ್ರಸರಣ ಮಾರ್ಗದಿಂದ 'ತಿಗಡಿ' ಗ್ರಾಮದಲ್ಲಿ ಹೊಸದಾಗಿ ನಿರ್ಮಿಸಲು ಉದ್ದೇಶಿಸಿರುವ 110/11ಕೆವಿ ವಿದ್ಯುತ್ ಕೇಂದ್ರಕ್ಕೆ ಲೀಲೋ 6.378 ಕಿಮಿ ವಿದ್ಯುತ್ ಮಾರ್ಗವನ್ನು ನಿರ್ಮಿಸಲಾಗಿದೆ. ಸದರಿ 110 ಕೆವಿ ವಿದ್ಯುತ್ ಪ್ರಸರಣ ಮಾರ್ಗವು ಬೆಳಗಾವಿ ಜಿಲ್ಲೆಯ ಗೋಕಾಕ ತಾಲೂಕಿನ ನಾಗನೂರ, ಧರ್ಮಟ್ಟಿ, ಪಟಗುಂದಿ, ಮಸಗುಪ್ಪಿ, ಸುನಧೋಳಿ, ತಿಗಡಿ ಹಾಗೂ ಅಕ್ಕಪಕ್ಕದ ಹದ್ದಿನಲ್ಲಿ ಬರುವ ಹಳ್ಳಿಗಳು ಮತ್ತು ಸರಹದ್ದಿನ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಹಾಯ್ದು ಹೋಗುತ್ತದೆ.

ಸದರಿ ವಿದ್ಯುತ್ ಪ್ರಸರಣ ಮಾರ್ಗವನ್ನು ನವ್ಹೆಂಬರ್ 05, 2023 ರಂದು ಇಲ್ಲವೆ ತದನಂತರ ಯಾವುದೇ ಕ್ಷಣದಲ್ಲಿ ವಿದ್ಯುತ್ತನ್ನು ಹರಿಬಿಡಲಾಗುವದು ಕಾರಣ ವಿದ್ಯುತ್ ಗೋಪುರಗಳನ್ನು ಹತ್ತುವುದಾಗಲಿ ಅಥವಾ ತಂತಿಗಳನ್ನು ಮುಟ್ಟುವುದಾಗಲಿ ಹಸಿರು ಟೊಂಗೆಗಳನ್ನು ಎಸೆಯುವುದಾಗಲಿ ಮತ್ತು ಲೈನ್ ಕೆಳಗಡೆ ದನಕರುಗಳನ್ನು ಕಟ್ಟುವುದಾಗಲಿ, ಗಿಡಮರಗಳನ್ನು ನೆಡುವುದಾಗಲಿ, ಮನೆ/ಗುಡಿಸಲುಗಳನ್ನು ನಿರ್ಮಿಸುವುದಾಗಲಿ ಪ್ರಾಣಾಪಾಯಕವಾಗುವುದು.

ಆದಕಾರಣ ಸಾರ್ವಜನಿಕರು ಇವುಗಳನ್ನು ಮಾಡಬಾರದು ಎಂದು ತಿಳಿಸಲಾಗಿದೆ. ಒಂದು ವೇಳೆ ಇಂತಹ ಕೃತ್ಯಗಳನ್ನು ಯಾರಾದರು ಎಸಗಿದಲ್ಲಿ ಮುಂದೆ ಒದಗಬಹುದಾದ ಅಪಾಯಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗಿರುವುದಿಲ್ಲ ಎಂದು ಬೃಹತ್ ಕಾಮಗಾರಿ ವಿಭಾಗ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಕಾರ್ಯನಿರ್ವಾಹಕ ಅಭಿಯಂತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪ್ಪಣ್ಣಾ ಜಿರನಾಳ ಗೆ ಪಿಎಚ್ ಡಿ ಪ್ರದಾನ



ಬೆಳಗಾವಿ: ಇಲ್ಲಿನ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಿಂದ ಅಪ್ಪಣ್ಣಾ ನಿಂಗಪ್ಪಾ ಜಿರನಾಳ ಗೆ ಪ್ರಸಕ್ತ ಸಾಲಿನ ಪಿಎಚ್ ಡಿ ಪ್ರದಾನ ಮಾಡಲಾಗಿದೆ.

ಗೋಕಾಕ ಅಂಕಲಗಿ ಸಮೀಪದ ಬೂದಿಹಾಳ ಗ್ರಾಮದವರಾದ ಅಪ್ಪಣ್ಣಾ ಜಿರನಾಳ ಅವರು "ಸಾಮಾಜಿಕ ಪರಿವರ್ತನೆಯಲ್ಲಿ ಮಾನವ ಬಂಧುತ್ವ ವೇದಿಕೆಯ ಪಾತ್ರ ಒಂದು ಸಮಾಜಶಾಸ್ತ್ರೀಯ ಅಧ್ಯಯನ" ಎಂಬ ವಿಷಯದ ಮೇಲೆ ಮಂಡಿಸಿದ ಮಹಾ ಪ್ರಬಂಧಕ್ಕೆ ಭೂತರಾಮನಹಟ್ಟಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಪಿಎಚ್ ಡಿ ಪದವಿ ಪ್ರಧಾನ ಮಾಡಿ ಗೌರವಿಸಿದೆ.

ಇವರಿಗೆ ಆರ್ಸಿಯು ದ ಸಮಾಜಶಾಸ್ತ್ರ ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಪ್ರೊ.ಚಂದ್ರಿಕಾ ಕೆ ಬಿ ಮಾರ್ಗದರ್ಶನ ಮಾಡಿದ್ದರು.

# ಅವ್ಯವಸ್ಥೆಯ ಆಗರವಾದ ಅಂಗನವಾಡಿ ಕೇಂದ್ರ ಮತ್ತು ಸರ್ಕಾರಿ ಶಾಲೆ

ಸಿರುಗುಪ್ಪ: ತಾಲೂಕಿನ ಗೋಸುಬಾಳು ಗ್ರಾಮದಲ್ಲಿ ಸೂಕ್ತ ಚರಂಡಿ ವ್ಯವಸ್ಥೆಯಿಲ್ಲದ ಕಾರಣ ಅಂಗನವಾಡಿ ಕೇಂದ್ರದ ಸುತ್ತಲೂ ಚರಂಡಿ ನೀರಿನಿಂದಾಗಿ ಕೇಂದ್ರಕ್ಕೆ ಬರುವ ಚಿಣ್ಣರಿಗೆ ತೀವ್ರ ತೊಂದರೆಯಾಗುತ್ತಿದ್ದು ಸ್ಥಳಕ್ಕೆ ಸಿಡಿಪಿಓ ಜಿ.ಪ್ರದೀಪ್ ಅವರು ಬೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಬಗ್ಗೆ ಪ್ರತಿಕ್ರಿಯಿಸಿದ ಅವರು ಈ ಸಮಸ್ಯೆಯ ಇತ್ಯರ್ಥಕ್ಕೆ ಗ್ರಾಮ ಪಂಚಾಯಿತಿ ಅಧಿಕಾರಿಗಳ ಗಮನಕ್ಕೆ ತಂದು ಈ ದುರಾವ್ಯಸ್ಥೆಯನ್ನು ಸರಿಪಡಿಸಲಾಗುವುದೆಂದರು.

ಚರಂಡಿ ನೀರು ರಸ್ತೆಯ ಮೇಲೆ ಹರಿಯುತ್ತಿರುವುದರಿಂದ ಶಾಲೆಗೆ ಅಕ್ಷರ ದಾಸೋಹ, ಅಂಗನವಾಡಿ ಪೌಷ್ಟಿಕ ಆಹಾರದ ಸಾಮಾಗ್ರಿಗಳನ್ನು ತಂದು ಹಾಕುವ ವಾಹನಗಳಿಗೆ ಹಾಗೂ ಶಾಲೆಗೆ ಬರುವ ವಿದ್ಯಾರ್ಥಿಗಳಿಗೆ, ವಯೋವೃದ್ದರಿಗೆ ಸಮಸ್ಯೆಯಾಗಿದೆ.



ಕಳೆದ ನಾಲ್ಕು ತಿಂಗಳ ಹಿಂದೆ ಶಾಲೆಯಲ್ಲಿನ ಧೀರ್ಘಕಾಲಿಕ ಸಮಸ್ಯೆಯಾದ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಶೌಚಾಲಯ ವ್ಯವಸ್ಥೆಯಿಲ್ಲದಿರುವುದರ ಬಗ್ಗೆ ಪತ್ರಿಕೆಯಲ್ಲಿ ಭಿತ್ತರಿಸಲಾಗಿತ್ತಾದರೂ ಮತ್ತದೇ ಯಥಾಸ್ಥಿತಿ ಮುಂದುವರೆದಿದೆ. ಅಂದಿನ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಮಡಗಿನ ಬಸಪ್ಪ ಅವರು ಜಾಗದ ಕೊರತೆ ಬಗ್ಗೆ ಬೊಟ್ಟು ಮಾಡಿ ಕೈತೊಳೆದುಕೊಂಡರು.

ಮಳೆಗಾಲ ಅಲ್ಲದಿದ್ದರೂ ಮಳೆಗಾಲದ ವಾತಾವರಣ ಸೃಷ್ಟಿಯಾಗಿದೆ. ಪ್ಲೋರೈಡ್‌ಯುಕ್ತ ಬೋರ್‌ವೆಲ್ ನೀರೇ ಗತಿಯಾಗಿದೆ. ಸಮಸ್ಯೆಗೆ ಪರಿಹಾರ ಹುಡುಕುವ ಅಧಿಕಾರಿಗಳೇ ಕೈಚೆಲ್ಲಿ ಕುಳಿತುಕೊಂಡರೆ ಇಂತಹ ಸಮಸ್ಯೆಗಳು ಮಕ್ಕಳ ಸಾಕ್ಷರತ ಗುಣಮಟ್ಟಕ್ಕೆ ಕಾರಣವಾಗಬಹುದಾಗಿದೆ.

ಸೂಕ್ತ ಸೌಲಭ್ಯಗಳಿಲ್ಲದೇ ಸೊರಗಿರುವ ಗ್ರಾಮದಲ್ಲಿ ಅಭಿವೃದ್ದಿಯತ್ತ ಗಮನಹರಿಸದ ಅಧಿಕಾರಿಗಳು ಮಾದ್ಯಮಗಳಿಗೆ ಮಾಹಿತಿ ನೀಡಿದರೆ ಸಮಸ್ಯೆ ಪರಿಹಾರವಾಗುತ್ತಾ? ಮಾದ್ಯಮಗಳಿಂದಲೇ ಅಭಿವೃದ್ದಿ ಮಾಡಿಸಿಕೊಳ್ಳಿಯೆಂದು ಇಲ್ಲಿನ ಸಮಸ್ಯೆಗಳ ಬಗ್ಗೆ ದೂರಿದ ಸಾರ್ವಜನಿಕರನ್ನು ಗುರಿಯಾಗಿಸಿಕೊಂಡು ಬೆದರಿಸುವ ಪ್ರಯತ್ನ ನಡೆಯುತ್ತಿದೆಂಬ ಆರೋಪವೂ ಕೇಳಿಬಂದಿತು.

ಇನ್ನು ಮುಂದಾದರೂ ಜಿಲ್ಲಾ ಮಟ್ಟದ ಅಧಿಕಾರಿಗಳು ಈ ಬಗ್ಗೆ ಗಮನವಹಿಸಿ ನಿರ್ಲಕ್ಷ್ಯ ಧೋರಣೆ ತೋರುತ್ತಿರುವ ಅಧಿಕಾರಿಗಳನ್ನು ಸರಿ ದಾರಿಗೆ ತಂದು ಗ್ರಾಮದ ಸ್ವಚ್ಛತೆ, ರಸ್ತೆ ಶಿಕ್ಷಣ, ನೀರು, ಆರೋಗ್ಯದಂತಹ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕೆಂದು ಗ್ರಾಮಸ್ಥರಾದ ದೊಡ್ಡ ಮಾರೆಣ್ಣ ಕಾರಣ್ಣ, ರಮೇಶ, ದೇವರಾಜ, ಆಗ್ರಹಿಸಿದರು.

# ಜ್ಞಾನವಿಕಾಸ ಕೇಂದ್ರದ ಸದಸ್ಯರಿಗೆ ಅಧ್ಯಯನ ಪ್ರವಾಸ

ಸಿರುಗುಪ್ಪ: ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯಡಿ ನಗರ ಮತ್ತು ತಾಲೂಕಿನ ವಿವಿಧ ವಲಯ ಮಟ್ಟದಲ್ಲಿ ಜ್ಞಾನವಿಕಾಸ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸದಸ್ಯರಿಗೆ 3ದಿನದ ಅಧ್ಯಯನದ ಪ್ರವಾಸಕ್ಕೆ ಯೋಜನೆವತಿಯಿಂದ ಕಳುಹಿಸಲಾಯಿತು.

ಗ್ರಾಮಾಭಿವೃದ್ದಿ ಯೋಜನೆಯ ಕೃಷಿ ಮೇಲ್ವಿಚಾರಕರಾದ ಪ್ರಭು ಹಿರೇಮಠ್ ಅವರು ಮಾತನಾಡಿ ಶ್ರೀ ವೀರೇಂದ್ರ ಹೆಗಡೆಯವರ ಮಾರ್ಗದರ್ಶನದಲ್ಲಿ 68ಜನ ಸದಸ್ಯರಿಗೆ ಅಧ್ಯಯನ ಪ್ರವಾಸದಲ್ಲಿ ರತ್ನಮಾನಸ ಗುರುಕುಲ ಶಿಕ್ಷಣ ಪದ್ದತಿ, ಸಿದ್ದವನ ನರ್ಸರಿ, ಮಂಜುಷಾ ವಸ್ತು ಸಂಗ್ರಹಾಲಯ, ಹಳೇಕಾರುಗಳ ಸಂಗ್ರಹಾಲಯಗಳ ವೀಕ್ಷಣೆ ವ್ಯವಸ್ಥೆ ಕಲ್ಪಿಸಲಾಗಿದೆ.

ಅಧ್ಯಯನದ ವೇಳೆ ಕೌಶಲ್ಯಾಭಿವೃದ್ದಿ ತರಬೇತಿ,




ಮಾದರಿ ಕೃಷಿ ತಾಕು, ಲಾಭದಾಯಕ ಹೈನುಗಾರಿಕೆ ಹಾಗೂ ಸ್ವಉದ್ಯೋಗಾವಲಂಬಿಗಳ ಅನುಭದ ಉಪನ್ಯಾಸ ನೀಡಲಾಗುವುದೆಂದರು.


ಇದೇ ವೇಳೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯ ಜ್ಞಾನ ವಿಕಾಸ ಕೇಂದ್ರದ ಸಮನ್ವಯಾಧಿಕಾರಿ ಪ್ರಿಯಾ, ವಲಯ ಮೇಲ್ವಿಚಾರಕಿ ರೂಪಾ, ಹಾಗೂ ವಿವಿಧ ವಲಯಗಳ ಮೇಲ್ವಿಚಾರಕಿಯರು ಇದ್ದರು.

# ಬೆಳಗಾವಿ ಜಿಲ್ಲೆಯ ಇಬ್ಬರಿಗೆ ರಾಜ್ಯೋತ್ಸವ ಪ್ರಶಸ್ತಿ

ಬೆಳಗಾವಿ: ಪ್ರತಿ ವರ್ಷ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸುವ ಗಣ್ಯ ವ್ಯಕ್ತಿಗಳಿಗೆ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡುವ ಸಂಪ್ರದಾಯವನ್ನು ಅನುಸರಿಸಿಕೊಂಡು ಬಂದಿರುವ ಸರ್ಕಾರ ಇದೀಗ 2023ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿಯನ್ನು ಪ್ರಕಟ ಮಾಡಿದೆ.

ಈ ಬಾರಿ 68 ಜನರಿಗೆ ವೈಯಕ್ತಿಕ ವಿಭಾಗದಲ್ಲಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಲಾಗುತ್ತಿದೆ. ಕನ್ನಡಕ್ಕಾಗಿ ಸೇವೆ ಸಲ್ಲಿಸಿದ ಸಂಘ ಸಂಸ್ಥೆಗಳಿಗೆ 10 ಪ್ರಶಸ್ತಿಯನ್ನು ನೀಡಲು ನಿರ್ಧರಿಸಿದೆ. 50ನೇ ಕನ್ನಡ ರಾಜ್ಯೋತ್ಸವ ಹಿನ್ನೆಲೆ 'ಕರ್ನಾಟಕ ಸಂಭ್ರಮ 50 ವರ್ಷ' ಎಂಬ ಹೆಸರಿನಲ್ಲಿ 10 ಪ್ರಶಸ್ತಿಯನ್ನೂ ನೀಡಲಿದೆ.

ಈ ಭಾರಿ ನೀಡುವ ರಾಜ್ಯೋತ್ಸವ ಪ್ರಶಸ್ತಿ ಬೆಳಗಾವಿ ಜಿಲ್ಲೆಯ ಇಬ್ಬರಿಗೆ ಲಭಿಸಿದೆ. ಸಮಾಜಸೇವೆ ಕ್ಷೇತ್ರದಲ್ಲಿ ಕಿತ್ತೂರು ತಾಲೂಕಿನ ಬೈಲೂರಿನ ನಿಷ್ಕಲ್ ಮಂಟಪದ



ನಿಜಗುಣಾನಂದ ಮಹಾಸ್ವಾಮೀಜಿ ಹಾಗೂ ಸಂಗೀತ/ನೃತ್ಯ ಕ್ಷೇತ್ರದಲ್ಲಿ ಎಂ.ಕೆ. ಹುಬ್ಬಳ್ಳಿಯ ಡಾ. ಎಸ್ ಬಾಳೇಶ ಭಜಂತ್ರಿ ಅವರಿಗೆ ಪ್ರಶಸ್ತಿ ಲಭಿಸಿದೆ.

ಅಲ್ಲದೇ 100 ವರ್ಷ ದಾಟಿದ ಇಬ್ಬರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಲಾಗುತ್ತಿದೆ. 13 ಮಹಿಳೆಯರು, 54 ಪುರುಷರು ಹಾಗೂ ಒಬ್ಬರು ಮಂಗಳಮುಖಿಗೆ ರಾಜ್ಯೋತ್ಸವ ಪ್ರಶಸ್ತಿ ದೊರೆತಿದೆ. ಪ್ರಶಸ್ತಿ ಪಡೆದವರಿಗೆ 5 ಲಕ್ಷ ರೂ. ನಗದು ಹಾಗೂ 25 ಗ್ರಾಂ ಚಿನ್ನದ ಪದಕ ನೀಡಲಾಗುತ್ತದೆ.

ಪ್ರಶಸ್ತಿ ಪಟ್ಟಿ: ಸಂಗೀತ/ನೃತ್ಯ ಕ್ಷೇತ್ರ: ಡಾ. ನಯನ ಎಸ್ ಮೋರೆ, ಶ್ರೀಮತಿ ನೀಲಾ ಎಂ ಕೊಡ್ಲಿ, ಶ್ರೀ ಶಬ್ಬೀರ್ ಅಹಮದ್, ಡಾ. ಎಸ್ ಬಾಳೇಶ ಭಜಂತ್ರಿ ಅವರಿಗೆ ಪ್ರಶಸ್ತಿ ಲಭಿಸಿದೆ.

ಚಲನಚಿತ್ರ ಕ್ಷೇತ್ರ: ಡಿಂಗ್ರಿ ನಾಗರಾಜ, ಬಿ. ಜನಾರ್ದನ (ಬ್ಯಾಂಕ್ ಜನಾರ್ದನ).

ರಂಗಭೂಮಿ ಕ್ಷೇತ್ರ: ಎಜಿ ಚಿದಂಬರ ರಾವ್ ಜಂಬೆ, ಪಿ ಗಂಗಾಧರ ಸ್ವಾಮಿ, ಹೆಚ್‌ಬಿ ಸರೋಜಮ್ಮ, ತಯ್ಯಬಖಾನ್ ಎಂ ಇನಾಮದಾರ, ವಿಶ್ವನಾಥ್ ವಂಶಾಕೃತ ಮಠ, ಪಿ ತಿಪ್ಪೇಸ್ವಾಮಿ.

ಶಿಲ್ಪಕಲೆ/ ಚಿತ್ರಕಲೆ/ ಕರಕುಶಲ ಕ್ಷೇತ್ರ: ಟಿ ಶಿವಶಂಕರ್, ಕಾಳಪ್ಪ ವಿಶ್ವಕರ್ಮ, ಮಾರ್ಥಾ ಜಾಕಿಮೋವಿಚ್ ಮತ್ತು ಪಿ ಗೌರಯ್ಯ.

ಯಕ್ಷಗಾನ/ಬಯಲಾಟ ಕ್ಷೇತ್ರ: ಅರ್ಗೋಡು ಮೋಹನದಾಸ್ ಶೆಣೈ, ಕೆ ಲೀಲಾವತಿ ಬೈಪಾಡಿತ್ತಾಯ, ಕೇಶಪ್ಪ ಶಿಳ್ಳಿಕ್ಯಾತರ, ದಳವಾಯಿ ಸಿದ್ದಪ್ಪ (ಹಂದಿಜೋಗಿ).

ಜಾನಪದ ಕ್ಷೇತ್ರ: ಹುಸೇನಬಿ ಬುಡೇನ್ ಸಾಬ್ ಸಿದ್ದಿ, ಶಿವಂಗಿ ಶಣ್ಮರಿ, ಮಹದೇವು, ನರಸಪ್ಪಾ, ಶಕುಂತಲಾ ದೇವಲಾನಾಯಕ, ಹೆಚ್‌ಕೆ ಕಾರಮಂಚಪ್ಪ, ಶಂಭು ಬಳಿಗಾರ, ವಿಭೂತಿ ಗುಂಡಪ್ಪ, ಚೌಡಮ್ಮ.

ಸಮಾಜಸೇವೆ ಕ್ಷೇತ್ರ: ಹುಚ್ಚಮ್ಮ ಬಸಪ್ಪ ಚೌದ್ರಿ, ಚಾರ್ಮಾಡಿ ಹಸನಬ್ಬ, ರೂಪಾ ನಾಯಕ್, ನಿಜಗುಣಾನಂದ ಮಹಾಸ್ವಾಮಿಗಳು, ನಾಗರಾಜು ಜಿ.

ಸಂಪುಟ: 4 ಸಂಚಿಕೆ: 228 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089